# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com

Volume: 01 | Issue : 35 | SATURDAY 11-04-2026 | PRGI No : KNKAN/26/A0962 | Pages:4 | Rs.2.00 | M: 9742418836


## ಶಿವಮೊಗ್ಗ: ತಡೆಗೋಡೆ ನಿರ್ಮಾಣದ ವೇಳೆ ಗುಡ್ಡ ಕುಸಿದು ಮೂವರು ಕಾರ್ಮಿಕರು ಸಾವು, 5 ಲಕ್ಷ ರೂ.ಪರಿಹಾರ ಘೋಷಿಸಿದ ಸಿಎಂ ಸಿದ್ದರಾಮಯ್ಯ!





ಶಿವಮೊಗ್ಗ: ಶಿವಮೊಗ್ಗ ಜಿಲ್ಲೆಯ ಹೊಸನಗರ ತಾಲೂಕಿನ ಹುಲಿಕಲ್ ಘಾಟ್‌ನಲ್ಲಿ ತಡೆಗೋಡೆ ನಿರ್ಮಾಣ ಕಾಮಗಾರಿ ವೇಳೆ ಗುರುವಾರ ಗುಡ್ಡ ಕುಸಿದು ಮೂವರು ಕಾರ್ಮಿಕರು ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಮೃತ ಕಾರ್ಮಿಕರನ್ನು ರಾಘವೇಂದ್ರ(37), ರಾಜು(30) ಮತ್ತು ಶಬ್ಬೀರ್(40) ಎಂದು ಗುರುತಿಸಲಾಗಿದೆ. ಮೃತಪಟ್ಟ ಕುಟುಂಬ ಸದಸ್ಯರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಲಾ 5 ಲಕ್ಷ ರೂ. ಪರಿಹಾರ ಘೋಷಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಅವರು ಪೋಸ್ಟ್ ಮಾಡಿದ್ದು, ಶಿವಮೊಗ್ಗ ಜಿಲ್ಲೆ ಹೊಸನಗರ ತಾಲ್ಲೂಕಿನ ಹುಲಿಕಲ್ ಘಾಟಿ ತಿರುವಿನಲ್ಲಿ ರಸ್ತೆ ತಡೆಗೋಡೆ ನಿರ್ಮಾಣ ಕಾಮಗಾರಿಯ ವೇಳೆ ಮಣ್ಣು ಕುಸಿದು ಮೂವರು ಕಾರ್ಮಿಕರು ಮೃತಪಟ್ಟ ಸುದ್ದಿ ಕೇಳಿ ದುಃಖವಾಯಿತು.

ಮೃತ ಕಾರ್ಮಿಕರ ಆತ್ಮಕ್ಕೆ ಚಿರಶಾಂತಿ ದೊರಕಲಿ, ಅವರ ಕುಟುಂಬ ಸದಸ್ಯರಿಗೆ ನೋವು ಭರಿಸುವ ಶಕ್ತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ ಎಂದಿದ್ದಾರೆ. ಘಟನೆ ಸಂಬಂಧ ಜಿಲ್ಲಾ ಉಸ್ತುವಾರಿ ಸಚಿವರಾದ ಮಧು ಬಂಗಾರಪ್ಪ ಅವರೊಂದಿಗೆ ಮಾತುಕತೆ ನಡೆಸಿ, ಮಾಹಿತಿ ಪಡೆದಿದ್ದೇನೆ. ಕುಟುಂಬಕ್ಕೆ ಆಧಾರವಾಗಿದ್ದ ದುಡಿಯುವ ಜೀವಗಳು ಈ ಘಟನೆಯಲ್ಲಿ ಬಲಿಯಾಗಿದ್ದು, ಮಾನವೀಯ ನೆಲೆಯಲ್ಲಿ ಮೃತ ಕಾರ್ಮಿಕರ ಕುಟುಂಬಕ್ಕೆ ತಲಾ ರೂ.5 ಲಕ್ಷ ಪರಿಹಾರ ನೀಡಲಾಗುವುದು ಎಂದು ತಿಳಿಸಿದ್ದಾರೆ.



ಬಾಗಲಕೋಟೆ ವಿಧಾನಸಭೆ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ದಂಪತಿ ನಗರದ ಶಾಸಕರ ಮಾದರಿ ಪ್ರಾಥಮಿಕ ಶಾಲೆ ನಂ 4. ಬೂತ ನಂ 166 ರಲ್ಲಿ ಮತ ಚಲಾಯಿಸಿದರು.



ಬಾಗಲಕೋಟೆ ವಿಧಾನಸಭೆ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಉಮೇಶ ಮೇಟಿ ಅವರು ಸ್ವಗ್ರಾಮ ತಿಮ್ಮಾಪುರದಲ್ಲಿ ಮತಚಲಾಯಿಸಿದರು.



ರಾಜ್ಯಸಭೆ ಸದಸ್ಯ ನಾರಾಯಣಸಾ ಭಾಂಡಗೆ ಅವರು ಕುಟುಂಬ ಸಮೇತ ಮತದಾನ ಕೇಂದ್ರಕ್ಕೆ ಆಗಮಿಸಿಮತ ಚಲಾಯಿಸಿದರು.



ಅಂಬೇಡ್ಕರ ಭವನದಲ್ಲಿ ಸ್ಥಾಪಿಸಲಾದ ಪಿಂಕ್ ಮತಗಟ್ಟೆಯಲ್ಲಿ ಯುವ ಮತದಾರರು ಮತ ಚಲಾವಣೆಗೆ ಉತ್ಸಾಹದಿಂದ ಸಾಲುಗಟ್ಟಿ ನಿಂತಿರುವ ದೃಶ್ಯ.

## ಸೈಲೆಂಟಾಗಿದ್ದ ನಾಯಕತ್ವ ಬದಲಾವಣೆ, ಸಂಪುಟ ಪುನಾರಚನೆ ವಿಚಾರ ಮತ್ತೆ ಮುನ್ನಲೆಗೆ: ಏಪ್ರಿಲ್ 12ಕ್ಕೆ ಸಿದ್ದರಾಮಯ್ಯ ಬಣ ದೆಹಲಿಗೆ..!



ಬೆಂಗಳೂರು: ಸಿದ್ದರಾಮಯ್ಯ ಬಣದ ನಾಯಕರು ಮತ್ತು ಶಾಸಕರು ಏ.12ರಿಂದ 2 ದಿನಗಳ ಕಾಲ ದೆಹಲಿಗೆ ಭೇಟಿ ನೀಡಲು ಸಜ್ಜಾಗುತ್ತಿದ್ದು, ಇದರ ಬೆನ್ನಲ್ಲೇ ರಾಜ್ಯ ರಾಜಕೀಯದಲ್ಲಿ ನಾಯಕತ್ವ ಬದಲಾವಣೆ, ಸಂಪುಟ ಪುನಾರಚನೆ ವಿಚಾರ ಕುರಿತ ಚರ್ಚೆ ಗರಿಗೆದರಿದೆ.

ವಿಧಾನಸಭೆಯ ಮುಖ್ಯ ಸಚೇತಕ ಅಶೋಕ್ ಪಟ್ಟಣ್ ನೇತೃತ್ವದ ತಂಡದಲ್ಲಿ ಇತ್ತೀಚೆಗೆ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿದ್ದ 30–35 ಶಾಸಕರು ದೆಹಲಿಗೆ ಭೇಟಿ ನೀಡುತ್ತಿದ್ದಾರೆಂದು ಮೂಲಗಳು ತಿಳಿಸಿವೆ.

ಈ ತಂಡವು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪ್ರಧಾನ ಕಾರ್ಯದರ್ಶಿ (ಸಂಘಟನೆ) ಕೆ ಸಿ ವೇಣುಗೋಪಾಲ್ ಮತ್ತು ಕರ್ನಾಟಕದ ಉಸ್ತುವಾರಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಅವರನ್ನು ದೆಹಲಿಯಲ್ಲಿ ಭೇಟಿ ಮಾಡಲು ಚಿಂತನೆ ನಡೆಸಿದ್ದಾರೆಂದು ತಿಳಿದುಬಂದಿದೆ.

ಸಚಿವ ಸಂಪುಟ ಪುನಾರಚನೆಗೆ ಕಾಂಗ್ರೆಸ್ ಹೈಕಮಾಂಡ್ ಸಿದ್ದರಾಮಯ್ಯ ಅವರಿಗೆ ಒಪ್ಪಿಗೆ ನೀಡುವ ಸಾಧ್ಯತೆಗಳಿವೆ ಎಂದು ಹೇಳಲಾಗುತ್ತಿದ್ದು, ಇದರ ಬೆನ್ನಲ್ಲೇ ಸಚಿವರಾಗಲು ಶಾಸಕರು ಲಾಬಿ ನಡೆಸಲು ಮುಂದಾಗಿದ್ದಾರೆಂದು ತಿಳಿದುಬಂದಿದೆ.

ಪಕ್ಷದ ಹಿತದೃಷ್ಟಿಯಿಂದ ಸಿದ್ದರಾಮಯ್ಯ ಅವರನ್ನೇ ಮುಖ್ಯಮಂತ್ರಿಯಾಗಿ ಮುಂದುವರಿಸ ಬೇಕೆಂದು ಅವರು ಒತ್ತಾಯಿಸಬಹುದು ಎಂದು ಮೂಲವೊಂದು ಟಿಎನ್‌ಐಗೆ ತಿಳಿಸಿದೆ.

ಟಿಬಿ ಜಯಚಂದ್ರ, ಬೇಲೂರು ಗೋಪಾಲಕೃಷ್ಣ, ಟಿ ರಘುಮೂರ್ತಿ, ಕೆಎಂ ಶಿವಲಿಂಗೇಗೌಡ, ಕೆ ಷಡಕ್ಷರಿ, ಬಿಆರ್ ಪಾಟೀಲ್, ರಾಜು ಕಾಗೆ, ಲಕ್ಷ್ಮಣ್ ಸವದಿ, ಎಆರ್ ಕೃಷ್ಣಮೂರ್ತಿ, ಕೆವೈ ನಂಜೇಗೌಡ, ಎಸ್‌ಎನ್ ನಾರಾಯಣಸ್ವಾಮಿ, ರಾಘವೇಂದ್ರ ಹಿಟ್ನಾಳ್, ಎಸ್‌ಆರ್ ಶ್ರೀನಿವಾಸ್, ರಮೇಶ್ ಬಂಡಿಸಿದ್ದೇಗೌಡ, ಸುಬ್ಬಾರೆಡ್ಡಿ, ಜಿಎಸ್ ಪಾಟೀಲ್ ಸೇರಿದಂತೆ ಇತರರು ದೆಹಲಿಗೆ ಭೇಟಿ ನೀಡುತ್ತಿದ್ದಾರೆಂದು ಎಂದು ಮೂಲಗಳು ತಿಳಿಸಿವೆ.

ಗೃಹ ಸಚಿವ ಡಾ.ಜಿ. ಪರಮೇಶ್ವರ ಅವರು ಸಿದ್ದರಾಮಯ್ಯ ತಮ್ಮ ಪೂರ್ಣ ಅವಧಿಯನ್ನು ಪೂರ್ಣಗೊಳಿಸುತ್ತಾರೆ ಎಂದು ಹೇಳಿದ ಕೆಲವು ದಿನಗಳ ನಂತರ ಈ ಬೆಳವಣಿಗೆಗಳು ಕಂಡು ಬಂದಿವೆ.

ಈ ನಡುವೆ ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ಕ್ಷೇತ್ರಗಳ ಉಪಚುನಾವಣೆ ಫಲಿತಾಂಶ ಹೇಗೇ ಬಂದರೂ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ ಮುಂದುವರಿಯಬೇಕು ಎಂಬ ನಿಲುವನ್ನು ಸಿದ್ದು ಬಣ ಕೈಗೊಂಡಿದ್ದು, ಈ ಸಂದೇಶವನ್ನು ಹೈಕಮಾಂಡ್'ಗೆ ತಲುಪಿಸಲು ಸಜ್ಜಾಗಿದ್ದಾರೆಂದು ತಿಳಿದುಬಂದಿದೆ.

ಕೇರಳ ಚುನಾವಣೆ ಏಪ್ರಿಲ್ 9ರಂದು ನಡೆಯುತ್ತಿದ್ದು ಈ ಹಿನ್ನೆಲೆಯಲ್ಲಿ ಮತದಾನ ಪೂರ್ಣಗೊಂಡ ಬಳಿಕ ನಾಯಕರು ಲಭ್ಯವಾಗಲಿದ್ದಾರೆ. ಹೀಗಾಗಿ ಏ.12ರಂದು ದೆಹಲಿಗೆ ಭೇಟಿ ನೀಡಲು ಸಿದ್ದು ಬಣ ಯೋಜನೆ ರೂಪಿಸಿದೆ ಎಂದು ಮೂಲಗಳು ತಿಳಿಸಿವೆ.

ಏತನ್ಮಧ್ಯೆ ಸಿದ್ದರಾಮಯ್ಯ ಅವರೂ ಕೂಡ ಸಚಿವ ಸಂಪುಟ ಪುನರ್‌ರಚನೆಗೆ ಅನುಮತಿ ಪಡೆಯಲು ಶೀಘ್ರದಲ್ಲೇ ದೆಹಲಿಗೆ ತೆರಳುವ ಸಾಧ್ಯತೆ ಇದೆ.

ಮತ್ತೊಂದೆಡೆ ಚನ್ನಗಿರಿ ಶಾಸಕ ಬಸವರಾಜ ಶಿವಗಂಗಾ ನೇತೃತ್ವದ ಮೊದಲ ಬಾರಿಗೆ ಆಯ್ಕೆಯಾಗಿರುವ ಶಾಸಕರು, ಡಿಕೆ .ಶಿವಕುಮಾರ್ ಬೆಂಬಲಿದ ನಾಯಕರು–ಶಾಸಕರು ಸಿಎಂ ಬದಲಾವಣೆ ವಿಷಯವನ್ನು ಮತ್ತೆ ಮುನ್ನೆಲೆಗೆ ತರಲು ಯೋಜನೆಯನ್ನು ರೂಪಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಉಪಮುಖ್ಯಮಂತ್ರಿ ಮತ್ತು ಕೆಪಿಸಿಸಿ ಮುಖ್ಯಸ್ಥ ಡಿಕೆ ಶಿವಕುಮಾರ್ ಶೀಘ್ರದಲ್ಲೇ ಹೈಕಮಾಂಡ್ ಭೇಟಿ ನೀಡುವ ಸಾಧ್ಯತೆಯನ್ನೂ ತಳ್ಳಿಹಾಕುವಂತಿಲ್ಲ ಎಂದು ಮೂಲಗಳು ತಿಳಿಸಿವೆ.

ಈ ಬಗ್ಗೆ ಪ್ರತಿಕ್ರಿಯಿಸಿದ ಗ್ರಾಮೀಣಾಭಿವೃದ್ಧಿ ಹಾಗೂ ಐಟಿ/ಬಿಟಿ ಸಚಿವ ಪ್ರಿಯಾಂಕ್ ಖರ್ಗೆಯವರು, ನಾಯಕತ್ವ ಬದಲಾವಣೆ ಕುರಿತ ಅಂತಿಮ ನಿರ್ಧಾರವನ್ನು ಹೈಕಮಾಂಡ್, ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿ ಸೇರಿ ತೆಗೆದುಕೊಳ್ಳುತ್ತಾರೆ ಎಂದು ಹೇಳಿದ್ದು, ಏಪ್ರಿಲ್ 9 ನಂತರದ ಬೆಳವಣಿಗೆಗಳನ್ನು ಕಾದು ನೋಡಬೇಕಿದೆ. ಅಲ್ಲಿಯವರೆಗೂ ಇತರರು ಏನು ಮಾತನಾಡುತ್ತಾರೆ (ನಾಯಕತ್ವ ಬದಲಾವಣೆ) ಎಂಬುದು ಅಪ್ರಸ್ತುತ ಎಂದು ತಿಳಿಸಿದ್ದಾರೆ.

## ಶಾಮನೂರು ಭದ್ರಕೋಟೆ ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಬಿಜೆಪಿ ಬಲ ಪ್ರದರ್ಶನವೋ? 'ಸಮರ್ಥ್' ಸಾಮರ್ಥ್ಯ ದರ್ಶನವೋ?





ದಾವಣಗೆರೆ: ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಗುರುವಾರ ಮತದಾನ ಆರಂಭವಾಗಿದೆ. ದಾವಣಗೆರೆ ದಕ್ಷಿಣ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಸಮರ್ಥ ಶಾಮನೂರು ಮಲ್ಲಿಕಾರ್ಜುನ್ ಮತ್ತು ಎಸ್‌ಟಿ ಸಮುದಾಯದ ಪ್ರತಿನಿಧಿ ಬಿಜೆಪಿಯ ಶ್ರೀನಿವಾಸ್ ಟಿ ದಾಸಕರಿಯಪ್ಪ ಕಣಕ್ಕಿಳಿದಿದ್ದಾರೆ.

ಸಮರ್ಥ್ ಅವರ ತಾತ ದಿವಂಗತ ಶಾಮನೂರು ಶಿವಶಂಕರಪ್ಪ ಸತತ ಆರು ಬಾರಿ ಗೆದ್ದಿರುವುದರಿಂದ ಈ ಕ್ಷೇತ್ರವನ್ನು ಕಾಂಗ್ರೆಸ್ ಭದ್ರಕೋಟೆ ಎಂದು ಪರಿಗಣಿಸಲಾಗಿದೆ. ಮತ್ತೊಂದೆಡೆ, ಬಿಜೆಪಿ ಈ ಕ್ಷೇತ್ರದಲ್ಲಿ ಎಂದಿಗೂ ಯಶಸ್ಸನ್ನು ಕಂಡಿಲ್ಲ. ಬಿಜೆಪಿ ನಾಯಕತ್ವವು ಅಲ್ಪಸಂಖ್ಯಾತ ಸಮುದಾಯದ ಮತಗಳ ವಿಭಜನೆಯೊಂದಿಗೆ ಒಬಿಸಿ ಮತ್ತು ಮುಂದುವರಿದ ಸಮುದಾಯದ ಮತಗಳ ಬೆಂಬಲ ಎದುರು ನೋಡುತ್ತಿದೆ. ವೀರಶೈವ ಲಿಂಗಾಯತರು, ಒಬಿಸಿಗಳು, ಎಸ್‌ಸಿಗಳು ಮತ್ತು ಅಲ್ಪಸಂಖ್ಯಾತ ಮತಗಳ ಬಹುಪಾಲು ಭಾಗದ ಬೆಂಬಲದ ಮೇಲೆ ಕಾಂಗ್ರೆಸ್‌ನ ಭರವಸೆ ಕೇಂದ್ರೀಕೃತವಾಗಿದೆ.

ದಾವಣಗೆರೆ ಉತ್ತರದಲ್ಲಿ ಉತ್ತಮ ಸಂಪರ್ಕ ಹೊಂದಿರುವ ಬಿಜೆಪಿಯ ದಾಸಕರಿಯಪ್ಪ ಅವರಿಗೆ, ಈ ಸ್ಪರ್ಧೆಯು ತಮ್ಮ ಸಾಮರ್ಥ್ಯವನ್ನು ಸಾಬೀತುಪಡಿಸಲು ಒಂದು ಅವಕಾಶವಾಗಿದೆ. ಚುನಾವಣಾ ಕಣದಲ್ಲಿ ಕುಟುಂಬವು ಸಮರ್ಥ್ ಅವರ ದೊಡ್ಡ ಶಕ್ತಿಯಾಗಿದೆ. ಅವರ ತಂದೆ ಎಸ್.ಎಸ್. ಮಲ್ಲಿಕಾರ್ಜುನ್, ಸಿದ್ದರಾಮಯ್ಯ ಸರ್ಕಾರದಲ್ಲಿ ಸಚಿವರಾಗಿದ್ದಾರೆ. ಅವರ ತಾಯಿ, ದಾವಣಗೆರೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರಿಂದಲೂ ಬೆಂಬಲ ವ್ಯಕ್ತವಾಗಿದೆ. ಸಮರ್ಥ್ ಈ ಹಿಂದೆ 2023 ರಲ್ಲಿ ತಮ್ಮ ತಾತ, ತಂದೆ ಮತ್ತು 2024 ರಲ್ಲಿ ತಮ್ಮ ತಾಯಿಯ ಜೊತೆ ಚುನಾವಣೆಗಳನ್ನು ನಿರ್ವಹಿಸಿದ್ದರು.

ಸಮರ್ಥ್ ಅವರ ಕುಟುಂಬವು ಎಸ್.ಎಸ್. ಕೇರ್ ಟ್ರಸ್ಟ್, ಎಸ್.ಎಸ್. ಜನಕಲ್ಯಾಣ ನಿಧಿ, ಹಳೆಯ ದಾವಣಗೆರೆಯ ಬಾಪೂಜಿ ಜನರಲ್ ಆಸ್ಪತ್ರೆಯ ಮೂಲಕ ಹಲವಾರು ಕಲ್ಯಾಣ ಮತ್ತು ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದೆ. ಜೊತೆಗೆ ಕೋವಿಡ್ –19 ಅವಧಿಯಲ್ಲಿ ಉಚಿತ ಲಸಿಕೆ ಮತ್ತು ಚಿಕಿತ್ಸೆಗಳನ್ನು ನೀಡಿದೆ.

ಕಾಂಗ್ರೆಸ್ ಅಲ್ಪಸಂಖ್ಯಾತ ಮತದಾರರಿಂದ ಹೆಚ್ಚಿನ ಸಂಖ್ಯೆಯ ಬೆಂಬಲವನ್ನು ನಿರೀಕ್ಷಿಸುತ್ತಿದೆ. ವೀರಶೈವ ಲಿಂಗಾಯತ ಮತದಾರರೊಂದಿಗೆ ಸಮರ್ಥ್ ಅವರ ಆಧ್ಯಾತ್ಮಿಕ ಸಂಪರ್ಕವು ಅವರ ಪರವಾಗಿ ಕೆಲಸ ಮಾಡುವ ನಿರೀಕ್ಷೆಯಿದೆ.

ವಂಶಪಾರಂಪರ್ಯ ರಾಜಕೀಯವು ಅವರ ನಿರೀಕ್ಷೆಗಳಿಗೆ ಅಡ್ಡಿಯಾಗಬಹುದು ಮತ್ತು ಅಲ್ಪಸಂಖ್ಯಾತ ಮತ್ತು ಒಬಿಸಿ ಮತದಾರರಲ್ಲಿನ ಭಿನ್ನಾಭಿಪ್ರಾಯದಿಂದಾಗಿ ಕ್ಷೇತ್ರದಲ್ಲಿ ಕಾಂಗ್ರೆಸ್ ತನ್ನ ನೆಲೆಯನ್ನು ಕಳೆದುಕೊಳ್ಳುತ್ತಿದೆ ಎಂದು ರಾಜಕೀಯ ವಿಶ್ಲೇಷಕರು ಅಭಿಪ್ರಾಯ ಪಟ್ಟಿದ್ದಾರೆ. ರಾಜಕೀಯ ಅನನುಭವವು ಕಾಂಗ್ರೆಸ್ ಅಭ್ಯರ್ಥಿಯ ವಿರುದ್ಧ ಕೆಲಸ ಮಾಡಬಹುದು ಎಂದು ಅವರು ಗಮನಸೆಳೆದಿದ್ದಾರೆ. ದಾಸಕರಿಯಪ್ಪ ಅವರಿಗೆ ಒಬಿಸಿ ಮತ್ತು ಮುಂದುವರಿದ ಸಮುದಾಯಗಳಲ್ಲಿ ಬಿಜೆಪಿಯ ಹೆಚ್ಚುತ್ತಿರುವ ಮತಗಳ ನೆಲೆಯಿಂದ ಲಾಭವಾಗುವ ಸಾಧ್ಯತೆಯಿದೆ.

ಸ್ವಾಭಿಮಾನಿ ವೇದಿಕೆ ದಾಸಕರಿಯಪ್ಪ ಅವರಿಗೆ ಬೆಂಬಲ ಘೋಷಿಸಿದೆ. ಪಕ್ಷದ ಜಿಲ್ಲಾ ಘಟಕದಲ್ಲಿನ ಬಂಡಾಯವನ್ನು ನಿವಾರಿಸುವಲ್ಲಿ ಬಿಜೆಪಿ ಹೆಚ್ಚಿನ ಪ್ರಮಾಣದಲ್ಲಿ ಯಶಸ್ವಿಯಾಗಿದೆ. ಕ್ಷೇತ್ರದಲ್ಲಿ ಅಲ್ಪಸಂಖ್ಯಾತ ಮತಗಳ ವಿಭಜನೆ ಮತ್ತು ಹಿಂದೂ ಮತಗಳ ಧ್ರುವೀಕರಣದ ಸಾಧ್ಯತೆಯನ್ನು ಬಿಜೆಪಿ ನಂಬಿದೆ. ಎಸ್‌ಟಿ ಮತದಾರರ ಬೆಂಬಲವನ್ನು ಪಡೆಯಲು ಬಿಜೆಪಿ ಸಹ ಆಶಿಸಿದೆ.

ಹೆಚ್ಚಿನ ಸಂಖ್ಯೆಯ ಅಲ್ಪಸಂಖ್ಯಾತ ಮತದಾರರ ಉಪಸ್ಥಿತಿಯು ಬಿಜೆಪಿ ವಿರುದ್ಧ ಕೆಲಸ ಮಾಡಬಹುದು ಎಂದು ವೀಕ್ಷಕರು ಹೇಳುತ್ತಾರೆ. ವೀರಶೈವ–ಲಿಂಗಾಯತ ಮತದಾರರನ್ನು ಗೆಲ್ಲುವುದು ದೊಡ್ಡ ಕೆಲಸ ಎಂದು ಅವರು ಹೇಳಿದ್ದಾರೆ. ಪಕ್ಷದೊಳಗಿನ ಗುಂಪು ಗಾರಿಕೆಯನ್ನು ಬಿಜೆಪಿ ಜಯಿಸಬೇಕಾಗಿದೆ ಮತ್ತು ಎಸ್‌ಸಿ ಮತಗಳ ಅಸ್ಥಿರ ಸ್ವಭಾವವು ದಾಸಕರಿಯಪ್ಪಗೆ ಮತ್ತೊಂದು ಸವಾಲಾಗಿದೆ.

## ಎಲ್‌ಪಿಜಿ ಕೊರತೆಗೆ ಕೇಂದ್ರವೇ ಹೊಣೆ

ಬೆಂಗಳೂರು: ರಾಜ್ಯದಲ್ಲಿ ಎಲ್‌ಪಿಜಿ ಕೊರತೆಯಲ್ಲಿ ರಾಜ್ಯ ಸರ್ಕಾರದ ಪಾತ್ರ ಏನೂ ಇಲ್ಲ. ಪೆಟ್ರೋಲ್–ಡೀಸೆಲ್, ಗ್ಯಾಸ್ ಎಲ್ಲವೂ ಕೇಂದ್ರ ಸರ್ಕಾರಕ್ಕೆ ಸಂಬಂಧಪಟ್ಟದ್ದು. ಇದರಲ್ಲಿ ಏನಾದರೂ ವ್ಯತ್ಯಯಗಳಾದರೆ ಅದಕ್ಕೆ ಕೇಂದ್ರವೇ ಹೊಣೆ ಎಂದು ರಾಜ್ಯದ ಆಹಾರ ಸಚಿವ ಕೆ.ಹೆಚ್. ಮುನಿಯಪ್ಪ ಹೇಳಿದರು.

ಆಟೋ ಚಾಲಕರು ಗ್ಯಾಸ್ ಸಿಗದಿದ್ದಕ್ಕೆ ರಾಜ್ಯ ಸರ್ಕಾರದ ಮೇಲೆ ಆಕ್ರೋಶಗೊಂಡಿರುವ ಬಗ್ಗೆ ಸುದ್ದಿಗೋಷ್ಠಿಯಲ್ಲಿಂದು ಪ್ರತಿಕ್ರಿಯಿಸಿದ ಅವರು, ಗ್ಯಾಸ್ ಕೊರತೆಯಲ್ಲಿ ನಮ್ಮ ಪಾತ್ರ ಇಲ್ಲ. ನಾವು ಕಾಳಸಂತೆಯಲ್ಲಿ ಮಾರಾಟವಾಗದಂತೆ ಏಜೆನ್ಸಿಗಳು ಸಮರ್ಪಕವಾಗಿ ಹಂಚಿಕೆ ಮಾಡದಿದ್ದರೆ ಅಂತಹ ವಿಚಾರಗಳ ಬಗ್ಗೆ ಗಮನ ಹರಿಸುತ್ತೇವೆ. ಗೃಹ ಸಚಿವರ ಜತೆ ಮಾತನಾಡಿದ್ದೇನೆ. ಕಾಳಸಂತೆ ಮಾರಾಟಕ್ಕೆ ಕಡಿವಾಣ ಹಾಕುವ ಕೆಲಸ ನಡೆದಿದೆ ಎಂದರು.

ಎಲ್‌ಪಿಜಿ ಸಮಸ್ಯೆಯಿಂದ ಸಂಕಷ್ಟಗಳು ಎದುರಾಗಿದ್ದು, ಆಟೋ ಚಾಲಕರು ಗ್ಯಾಸ್ ಸಿಗದೆ ಆಗಿರುವ ತೊಂದರೆಯನ್ನು ನಮ್ಮ ಗಮನಕ್ಕೆ ತಂದಿದ್ದಾರೆ. ನಾಳೆ ಅಧಿಕಾರಿಗಳ ಸಭೆ ಕರೆದಿದ್ದೇನೆ. ಕೇಂದ್ರಕ್ಕೂ ಎಲ್‌ಪಿಜಿ ಸಮರ್ಪಕ ಪೂರೈಕೆಗೆ ಆಗ್ರಹಿಸಿ ಪತ್ರ ಬರೆದಿದ್ದೇನೆ. ಇನ್ನು ಉತ್ತರ ಬಂದಿಲ್ಲ ಎಂದು ಹೇಳಿದರು.

ಅಕ್ಕಪಕ್ಕದ ರಾಜ್ಯಗಳಲ್ಲಿ ಎಲ್‌ಪಿಜಿ ಸಮಸ್ಯೆ ಇಲ್ಲ. ನಮ್ಮಲ್ಲೇ ಕೊರತೆ ಇರುವುದು. ಕೇಂದ್ರದಿಂದ ಮಲತಾಯಿ ಧೋರಣೆ ಆಗಿದೆ. ರಾಜ್ಯಕ್ಕೆ ಸಮರ್ಪಕವಾಗಿ ಎಲ್‌ಪಿಜಿ ಪೂರೈಕೆಯಾಗುತ್ತಿಲ್ಲ ಎಂದು ದೂರಿದರು.

ಎಲ್‌ಪಿಜಿಯನ್ನು ಕಾಳಸಂತೆಯಲ್ಲಿ ಮಾರಾಟ ಮಾಡುವುದಕ್ಕೆ ಕಡಿವಾಣ ಹಾಕುತ್ತಿದ್ದೇವೆ. ತೂಕ ಮತ್ತು ಅಳತೆ ಇಲಾಖೆಯ ಸಭೆಯನ್ನು ಕರೆದಿದ್ದೇನೆ. ಅವರಿಗೂ ಕಾಳಸಂತೆ ಮಾರಾಟಕ್ಕೆ ಬ್ರೇಕ್ ಹಾಕುವಂತೆ ಸೂಚನೆ ಕೊಟ್ಟಿದ್ದೇನೆ. ಜತೆಗೆ ಎಲ್ಲಾ ತೈಲ ಕಂಪೆನಿಗಳ ಮುಖ್ಯಸ್ಥರ ಸಭೆಯನ್ನು ನಾಳೆ ಕರೆದು ಚರ್ಚಿಸುತ್ತೇನೆ ಎಂದು ಅವರು ತಿಳಿಸಿದರು.

ರಾಜ್ಯದ ಹಲವೆಡೆ ಬಿಪಿಎಲ್ ರೇಷನ್ ಕಾರ್ಡ್‌ಗಳನ್ನು ತೆಗೆದು ಹಾಕಿರುವ ಬಗ್ಗೆ



ಪ್ರತಿಕ್ರಿಯಿಸಿದ ಅವರು, ಅರ್ಹ ಬಿಪಿಎಲ್ ಕಾರ್ಡ್‌ದಾರರ ಕಾರ್ಡ್‌ಗಳನ್ನು ತೆಗೆದು ಹಾಕಿಲ್ಲ. ಅನರ್ಹ ಕಾರ್ಡ್‌ಗಳನ್ನು ರದ್ದು ಮಾಡಿದ್ದೇವೆ ಅಷ್ಟೇ ಎಂದು ಹೇಳಿದರು.

# ಜಿಲ್ಲಾ ಮಟ್ಟದ ಕನ್ನಡ ಜಾಗೃತಿ ಸಮಿತಿ ಸಭೆ

## ಜಿಲ್ಲೆಯಲ್ಲಿ ಕನ್ನಡ ಅನುಷ್ಠಾನ ಪರಿಣಾಮಕಾರಿಯಾಗಲಿ: ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್



**ಬೆಳಗಾವಿ ವಾರ್ತೆ ಗದಗ:** ಜಿಲ್ಲೆಯಲ್ಲಿ ಕನ್ನಡ ಭಾಷೆಯು ಅನುಷ್ಠಾನ ಪರಿಣಾಮಕಾರಿಯಾಗಬೇಕು. ಪ್ರತಿ ತಿಂಗಳು 5 ನೇ ತಾರಿಖಿನೊಳಗಾಗಿ ಎಲ್ಲ ಇಲಾಖೆಯುವರು ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಕನ್ನಡ ಅನುಷ್ಠಾನ ವರದಿಯುನ್ನು ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜರುಗಿದ ಜಿಲ್ಲಾ ಮಟ್ಟದ ಕನ್ನಡ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಾಜ್ಯ ಸರ್ಕಾರದ ಇಲಾಖೆಗಳು, ಉದ್ಯಮಗಳು ಅಥವಾ ಸ್ವಾಯುತ್ತ ಸಂಸ್ಥೆಗಳು, ಸಹಕಾರ ಮತ್ತು ಸಾರ್ವಜನಿಕ ಉದ್ಯಮಗಳು , ಶೈಕ್ಷಣಿಕ ಸಂಸ್ಥೆಗಳು, ಬ್ಯಾಂಕುಗಳು, ಹಣಕಾಸು ಸಂಸ್ಥೆಗಳು, ಖಾಸಗಿ ಕೈಗಾರಿಕೆಗಳು ಮತ್ತು ವಿಶ್ವ ವಿದ್ಯಾಲಯಗಳು ಕನ್ನಡ ಭಾಷೆಯಲ್ಲಿಯೇ ಪತ್ರ ವ್ಯವಹಾರ ಮಾಡಬೇಕು. ಪ್ರತಿ ತಿಂಗಳು ಜರುಗುವ ಕೆಡಿಪಿ ಸಭೆ ಅಜೆಂಡಾದಲ್ಲಿ ಕನ್ನಡ ಅನುಷ್ಠಾನದ ವರದಿ ಬಗ್ಗೆಯೂ ಚರ್ಚೆಯಾಗಬೇಕು ಎಂದರು.

ಕನ್ನಡ ಭಾಷಾ ಅನುಷ್ಠಾನಗೊಳಿಸಲು ಪ್ರತಿ ತಾಲೂಕಿನಲ್ಲಿ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲೂಕು ಮಟ್ಟದ ಸಮಿತಿ ಸಭೆ ಕರೆದು ತಾಲೂಕಿನಾದ್ಯಂತ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಕೈಗೊಳ್ಳಬೇಕು. ಬೇರೆ ರಾಜ್ಯಗಳಿಂದ ಕರ್ನಾಟಕ ರಾಜ್ಯಕ್ಕೆ ಆಗಮಿಸಿದ ಬ್ಯಾಂಕ್ ನೌಕರರಿಗೆ ಕನ್ನಡ ಭಾಷಾ ತರಬೇತಿಯನ್ನು ಹಮ್ಮಿಕೊಂಡು ಅವರು ಕಡ್ಡಾಯವಾಗಿ ತರಬೇತಿಗೆ ಹಾಜರಾಗುವ ಹಾಗೆ ನೋಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ನಿರ್ದೇಶನ ನೀಡಿದರು.

ಇದೇ ಸಂದರ್ಭದಲ್ಲಿ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸರ್ಕಾರ ಅಥವಾ ಸ್ಥಳೀಯ ಪ್ರಾದಿಕಾರಗಳಿಂದ ಅನುಮತಿ ಮತ್ತು ಮಂಜೂರಾತಿ ಯೊಂದಿಗೆ ಕಾರ್ಯನಿರ್ವಹಿಸುತ್ತಿರುವ ವಾಣಿಜ್ಯ, ಕೈಗಾರಿಕೆ ಹೋಟೆಲ್ ಗಳು, ಸಾರಿಗೆ ವಿಭಾಗ ಗಳಲ್ಲಿ ಕನ್ನಡ ಭಾಷೆಯ ನಾಮಫಲಕಗಳ ಪ್ರದರ್ಶನದ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಡಿವೈಎಸ್ ಪಿ ಮುರ್ತುಜಾ ಖಾದ್ರಿ, ಜಿ.ಪಂ.ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಕಾರ್ಯದರ್ಶಿ ಕಿಶೋರ ಬಾಬು, ಕನ್ನಡ ಜಾಗ್ರತಿ ಸಮಿತಿಯ ಅಧಿಕಾರೇತರ ಸದಸ್ಯರುಗಳಾದ ಅಶೋಕ ಬರಗುಂಡಿ, ರಾಜಶೇಖರ ದಾನರೆಡ್ಡಿ, ಮುತ್ತು ಬಿಳಿಎಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಬಸವರಾಜ ಬಳ್ಳಾರಿ, ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ್ , ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ಡಾ.ನಂದಾ ಹಣಬರಟ್ಟಿ, ಶಾಲಾ ಶಿಕ್ಷಣ ಇಲಾಖೆಯು ಉಪನಿರ್ದೇಶ ಕ ಆರ್.ಎಸ್.ಬುರುಡಿ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಉಪನಿರ್ದೇಶಕ ಎಂ.ಎಂ.ತುಂಬರಮಟ್ಟಿ ಸೇರಿದಂತೆ ವಿವಿಧ ಇಲಾಖೆಯು ಅಧಿಕಾರಿಗಳು ಹಾಜರಿದ್ದರು.

# ಮೂರ್ತಿ ಪ್ರತಿಷ್ಠಾಪನೆ

**ಬೆಳಗಾವಿ ವಾರ್ತೆ ನವಲಗುಂದ:** ಪಟ್ಟಣದ ಕುಂಬಾರ ಓಣಿಯಲ್ಲಿರುವ ಬೀರಲಿಂಗೇಶ್ವರ ದೇವಸ್ಥಾನದ ನೂತನ ಶೀಲಾ ಮೂರ್ತಿಯ ಪ್ರಾಣ ಪ್ರತಿಷ್ಟಾಪನೆ ಕಾರ್ಯಕ್ರಮದ ಅಂಗವಾಗಿ ಬೃಹತ್ ಮೆರವಣಿಗೆಯೊಂದಿಗೆ ಲಾಲಗುಡಿ ಮಾರುತಿ ದೇವಸ್ಥಾನದಿಂದ ಡೊಳ್ಳುಮೇಳದೊಂದಿದೆ 101 ಕಳಸಗಳ ಪೂರ್ಣ ಕುಂಭಗಳ ಮೆರವಣಿಗೆ ನಡೆಯಿತು.

ಪಟ್ಟಣದ ಶ್ರೀ ಅಜಾತ ನಾಗಲಿಂಗ ಮಠದ ವೀರೇಂದ್ರ ಮಹಾಸ್ವಾಮಿಗಳು ಕುಂಭಮೇಳ ಮೆರವಣಿಗೆ ಚಾಲನೆ ನೀಡಿದರು.

ಲಾಲಗುಡಿಯಿಂದ ಪ್ರಾರಂಭವಾದ ಮೆರವಣಿಗೆಯು ಸಕಲ ವಾದ್ಯಮೇಳ ಗಳೊಂದಿಗೆ ಪಟ್ಟಣದ ಪ್ರಮುಖ ಬೀದಿಗ ಳಾದ ಲಿಂಗರಾಜ ವೃತ್ತ, ಸಿದ್ದಾಪುರ ಓಣಿ, ಗಾಂಧಿ ಮಾರುಕಟ್ಟೆ, ವಿನಾಯಕ ಪೇಠ, ಮಂಜುನಾಥ ನಗರ, ಕುಂಬಾರ ಓಣಿ ಮಾರ್ಗವಾಗಿ ಕುರುಬರ ಓಣಿಯ ಬೀರಲಿಂಗೇಶ್ವರ ದೇವಸ್ಥಾನ ತಲುಪಿತು.

ಮೆರವಣಿಗೆಯುದ್ದಕ್ಕೂ ಭಕ್ತರು ಬೀರಲಿಂಗೇಶ್ವರನ ಘೋಷಣೆಗಳು ಮುಗಿಲುಮುಟ್ಟಿದ್ದವು. ಪುರುಷರು ಕೂಡ ಹೊಸ ಬಟ್ಟೆಗಳನ್ನು ಧರಿಸಿಕೊಂಡು ತಲೆಯ ಮೇಲೆ ಹಳದಿ ಪೇಟಾ ಹಾಕಿ ಬಂಡಾರದಲ್ಲಿ ಮಿಂದೆದ್ದು ಉತ್ಸುಕತೆಯಿಂದ ಭಾಗವಹಿಸಿದ್ದು,



ಮೆರವಣಿಗೆಗೆ ವಿಶೇಷ ಮೆರಗು ನೀಡಿದ್ದರು. ಡೊಳ್ಳು ಕುಣಿತ ವಿಶೇಷ ಮೆರಗು ನೀಡಿತು.

ಈ ವೇಳೆ ಬೀರಲಿಂಗೇಶ್ವರ ಸೇವಾ ಸಮಿತಿ ಅಧ್ಯಕ್ಷ ದ್ಯಾಮಪ್ಪ ಫಕೀರಪ್ಪ ಮಾಬನೂರ , ಶಿವಾನಂದ ಕೊಳಲಿನ , ಹಣತಂಪ್ಪ ಬಂಡಿವಾಡ, ಯಲ್ಲಪ್ಪ ದಾಡಿಬಾವಿ, ಬಸಪ್ಪ ಕೊಳಲಿನ , ಯಲ್ಲಪ್ಪ ಲಕ್ಕನ್ನವರ, ಭೀಮಪ್ಪ ದಾಡಿಬಾವಿ, ಪುರಸಭೆ ಸದಸ್ಯ ರವಿ ಬೆಂಡಿಗೇರಿ, ಮೈಲಾರಪ್ಪ ವೈದ್ಯ, ಮಾಳಪ್ಪ ಮೂಲಿಮನಿ ಸೇರಿದಂತೆ ಕುರುಬ ಸಮಾಜದ ಸಮಸ್ತ ಗುರುಹಿರಿಯರು ಹಾಗು ಯುವಕರು ಉಪಸ್ಥಿತರಿದ್ದರು.

# ಮಿತಿಮೀರಿದ ಮದ್ಯ ಮಾರಾಟಗಾರರ ಅಟ್ಟಹಾಸ, ಮದ್ಯ ಪ್ರಿಯರಿಗೆ ಸಂಕಷ್ಟ !

**ಬೆಳಗಾವಿ ವಾರ್ತೆ ಹೂ ಹಿಪ್ಪರಗಿ :** ಬಸವನ ಬಾಗೇವಾಡಿಯಲ್ಲಿ ಮದ್ಯ ಮಾರಾಟಗಾರರ ಅಟ್ಟಹಾಸ ಮಿತಿಮಿರಿದೆ. ಹೆಚ್ಚಿನ ಬೆಲೆ ವಸೂಲಿ ಮಾಡಿ ಭರ್ಜರಿ ಕಮಾಯಿ ಮಾಡುತ್ತಾ ಇದ್ದಾರೆ. ಅದರಲ್ಲೂ ಸಿಎಲ್–2 ಮಳಿಗೆಯಲ್ಲಿ ಎಂಆರ್‌ಪಿ ಬೆಲೆ ನೀಡಬೇಕು ಎನ್ನುವ ಕಾನೂನು ಇದೆ. ಆದರೆ ಇಲ್ಲಿ ಮಾತ್ರ ಎಂಆರ್?ಪಿಗಿಂತಲೂ 30–40 ರೂಪಾಯಿ ಹೆಚ್ಚಿಗೆ ವಸೂಲಿ ಮಾಡುತ್ತಾ ಇದ್ದಾರೆ.

ರಾಜಾರೋಷವಾಗಿ ಹೆಚ್ಚಿನ ಬೆಲೆಗೆ ಮದ್ಯವನ್ನು ಮಾರಾಟ ಮಾಡುತ್ತಿದ್ದರೂ ಬಸವನ ಬಾಗೇವಾಡಿ ಅಬಕಾರಿ ಇಲಾಖೆ ಅಧಿಕಾರಿಗಳು ಮಾತ್ರ ಸುಮ್ಮನಿದೆ. ಸಿಎಲ್–2 ಶಾಪ್‌ನಲ್ಲಿ ಎಂಆರ್‌ಪಿಗಿಂತ ಒಂದು ಪೈಸೆ ಹೆಚ್ಚಿಗೆ ಪಡೆಯಬಾರದು ಎನ್ನುವ ಕಾನೂನು ಇದೆ. ಆದರೆ ಹೂವಿನ ಹಿಪ್ಪರಗಿ ಮದ್ಯದ ಅಂಗಡಿ ಮಾಲೀಕರುವ ಆಡಿದ್ದೇ ಆಟವಾಗಿದೆ. ಹೆಚ್ಚಿನ ಬೆಲೆಗೆ ಮದ್ಯ ಮಾರಾಟ ಮಾಡುತ್ತಿರು ಹೂ ಹಿಪ್ಪರಗಿ ಪಟ್ಟಣದ ಸರ್ಕಲ್ ಹತ್ತಿರ ಇರುವ ಅನಂತಮ್ಮ.ಎನ್.ಅನ್ನಗೌನಿ ಲಕ್ಷ್ಮಿ ವೈನ್ ಶಾಪ್ ಲೈಸೆನ್ಸ್ ರದ್ದು ಮಾಡಬೇಕೆಂದು ಭೀಮ್ ಆರ್ಮಿ ಸಂವಿಧಾನ ರಕ್ಷಕ ದಳ ರಾಜ್ಯ ಸಂಘಟನಾ ಸಂಚಾಲಕ ಮಹಾಂತೇಶ ಹಾದಿಮನಿ ಮತ್ತು ಭೀಮ್ ಆರ್ಮಿ ಸಂಘಟನೆಯ ಕಾರ್ಯಕರ್ತರು ಅಬಕಾರಿ ಇಲಾಖೆಗೆ ಮನವಿ ನೀಡಿ ಒತ್ತಾಯ ಮಾಡಿದ್ದಾರೆ.

ಇಲ್ಲಿನ ಸಿಎಲ್–2 ಶಾಪ್ ಮಾಲೀಕರು ಅಬಕಾರಿ ನಿಯಮ ಸಂಪೂರ್ಣ ಗಾಳಿಗೆ ತೂರಿದರೂ ಅಬಕಾರಿ ಇಲಾಖೆ ಅಧಿಕಾರಿ ಗಳು ಕ್ರಮ ತೆಗೆದುಕೊಳ್ಳುತ್ತಿಲ್ಲ. ಸಿಎಲ್–2 ಕೌಂಟರ್ ಸೇಲ್ ಮಾತ್ರ ಮಾಡಬೇಕು. ಆದರೆ ಅಂಗಡಿ ಮಾಲೀಕರು ಪಕ್ಕದಲ್ಲೇ ಟೇಬಲ್ ಹಾಕಿ ಸರ್ವಿಸ್ ನೀಡುತ್ತಾರೆ. ಇದು ಕಾನೂನು ಬಾಹಿರ.ಃಕ ಪಾಕೀಟ್ ಮೇಲೆ 70 ರೂಪಾಯಿ ಇದೆ ಮಾಲೀಕರೇ 85ರೂಪಾಯಿ ಯಾಕೆ ? ತೆಗುದುಕೊಳ್ಳುತ್ತಿರಿ ಎಂದರೆ ಎ ನಿನಗೆ ಬೇಕಾದರೆ ತೆಗೆದುಕೊಳ್ಳು ಇಲ್ಲ ಅಂದ್ರೆ ಜಾಗ ಖಾಲಿ ಮಾಡು ಏನು ಮಾಡಿಕೊಳ್ಳುತ್ತಿ ಮಾಡ್ಕೋ ಹೋಗು ಎಂದು ಮದ್ಯ ಪ್ರೀಯರಿಗೆ ಅವಾಜ್ ಹಾಕುತ್ತಿದ್ದಾರೆ. ಮದ್ಯದ ಶಾಪ್ ಮಾಲೀಕರು ಮದ್ಯ ಪ್ರೀಯರಿಂದ ಹಗಲು ದರೋಡೆ ಮಾಡುತ್ತಿದ್ದಾರೆ. ಮದ್ಯ ಎಂಆರ್‌ಪಿ ದರಕ್ಕೆ



ಮಾರಾಟ ಮಾಡಿದರೆ ಸರ್ಕಾರಕ್ಕೆ ನ್ಯಾಯಯುತವಾಗಿ ತೆರಿಗೆ ಹೋಗುತ್ತದೆ. ಆದರೆ ಈ ಮದ್ಯದ ಅಂಗಡಿ ಮಾಲೀಕರು ಹೆಚ್ಚಿನ ಬೆಲೆಗೆ ಮದ್ಯ ಮಾರಾಟ ಮಾಡಿ ಭರ್ಜರಿ ಕಮಾಯಿ ಮಾಡುತ್ತಿದ್ದಾರೆ. ಇದರಲ್ಲಿ ಅಬಕಾರಿ ಇಲಾಖೆ ಅಧಿಕಾರಿಗಳಿಗೆ ಪಾಲಿದೆ ಎಂದು ಭೀಮ್ ಆರ್ಮಿ ಸಂಘಟನೆಯ ಕಾರ್ಯಕರ್ತರು ಆರೋಪ ಮಾಡುತ್ತಿದ್ದಾರೆ.

ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿ ಆದಾಯ ಬರುವ ಅಬಕಾರಿ ಇಲಾಖೆಯನ್ನೇ ವಂಚಿಸಿ ರಾಜಾರೋಷವಾಗಿ ಹೆಚ್ಚಿನ ಬೆಲೆಗೆ ಮದ್ಯವನ್ನು ಮಾರಾಟ ಮಾಡ 'ಲಾಗುತ್ತಿದೆ. ಇನಾದ್ರು ಬಸವನ ಬಾಗೇವಾಡಿ ಅಬಕಾರಿ ಇಲಾಖೆ ಅಧಿಕಾರಿಗಳು ಮದ್ಯದ ಶಾಪ್ ಮಾಲೀಕರ ವಿರುದ್ಧ ಕಠಿಣ ಕ್ರಮ ಕೈಗೊಂಡು ನಿಯಮ ಪಾಲಿಸುತ್ತಾರಾ ಎಂಬುದನ್ನು ನೋಡಬೇಕಿದೆ.ಈ ಸಂದರ್ಭದಲ್ಲಿ, ಎಸ್ ಎಸ್ ಕೆಂಪೇಗೌಡ್ರು, ರಿಯಾಜ ಡೋಣುರ, ಸದಾಶಿವ ಚಿಮ್ಮಲಗಿ, ಶಿವು ಅಂಗಡಗೇರಿ ಭೀಮ್ ಆರ್ಮಿ ಸಂಘಟನೆಯ ಕಾರ್ಯಕರ್ತರು ಇದ್ದರು.

# ಏಪ್ರಿಲ್ 12 ರಂದು ಪ್ರವೇಶ ಪರೀಕ್ಷೆ

ಗದಗ : ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಗದಗ, ರೋಣ ಮತ್ತು ಮುಂಡರಗಿ ತಾಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 2026–27 ನೇ ಸಾಲಿಗೆ 6 ನೇ ತರಗತಿ ದಾಖಲಾತಿ ಪಡೆಯಲು ಪ್ರವೇಶ ಪರೀಕ್ಷೆ ದಿನಾಂಕ 12.04.2026 ರಂದು ಜರುಗಲಿದೆ.

ಅರ್ಜಿ ಸಲ್ಲಿಸಲು ನೋಂದಾಯಿಸಿದ ಪಾಲಕರ/ಪೋಷಕರ ದೂರವಾಣಿ ವಿದ್ಯಾರ್ಥಿಯ ಹೆಸರಿನೊಂದಿಗೆ ಪರೀಕ್ಷಾ ಕೇಂದ್ರದ ಮಾಹಿತಿಯನ್ನುನಿರ್ದೇಶನಾಲಯ, ಬೆಂಗಳೂರು ರವರಿಂದ ಕಳುಹಿಸಲಾಗಿದೆ. ಸದರಿ ಪರೀಕ್ಷಾ ಪ್ರವೇಶ ಪತ್ರಗಳನ್ನು https://erp.dom.karnataka.gov.in/adm/Admission/StudentHallticket ಪಡೆದುಕೊಳ್ಳಬಹುದಾಗಿದೆ. ತಮಗೆ ನೀಡಿರುವ ಪರೀಕ್ಷಾ ಪ್ರವೇಶ ಪತ್ರಗಳಲ್ಲಿ ಸೂಚಿಸಿರುವ ಪರೀಕ್ಷಾ ಕೇಂದ್ರಕ್ಕೆ ಹಾಜರಿರಲು ಈ ಮೂಲಕ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

## ಗದುಗಿನ ದುರ್ಗಾದೇವಿ ಶಿಕ್ಷಣ ಸಂಸ್ಥೆಗೆ ಮುದ್ದೇನಹಳ್ಳಿಯ ಪ್ರಶಾಂತಿ ಬಾಲಮಂದಿರದ ಟ್ರಸ್ಟಿಗಳು ಭೇಟಿ

# ಬಾಲ್ಯದಲ್ಲಿ ಮಕ್ಕಳಿಗೆ ಮೌಲ್ಯಯುತವಾದ ಶಿಕ್ಷಣ ಅಗತ್ಯವಾಗಿದೆ : ಎಂ.ಎಸ್. ಸತ್ಯನಾರಾಯಣ



**ಬೆಳಗಾವಿ ವಾರ್ತೆ ಗದಗ :** ಭಾರತದ ಸಂಸ್ಕೃತಿ ಉಳಿಯ ಬೇಕಾದರೆ ಬಡತನ, ರೋಗ–ರುಜಿನಗಳು ನಿವಾರಣೆಯಾಗಬೇಕು ಇದಕ್ಕೆ ಮೌಲ್ಯಯು ತವಾದ ಶಿಕ್ಷಣ ಅಗತ್ಯವಾಗಿದೆ ಎಂದು ಚಿಕ್ಕಬಳ್ಳಾಪೂರ ಜಿಲ್ಲೆಯ ಮುದ್ದೇನಹಳ್ಳಿ ಪ್ರಶಾಂತಿ ಬಾಲಮಂದಿರದ ಟ್ರಸ್ಟಿಗಳಾದ ಎಂ.ಎಸ್. ಸತ್ಯನಾರಾಯಣ ಅವರು ಹೇಳಿದರು.

ಅವರು ನಗರದ ಗಂಗಾಪುರ ಪೇಟೆಯಲ್ಲಿರುವ ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಗೆ ಭೇಟಿ ನೀಡಿ, ಸಮಿತಿಯಿಂದ ಗೌರವ ಸ್ವೀಕರಿಸಿ ಮಾತನಾಡಿ, ಮಕ್ಕಳಿಗೆ ಮೌಲ್ಯಯುತ ಶಿಕ್ಷಣವನ್ನು ಬಾಲ್ಯದಲ್ಲಿ ನೀಡಿದರೆ ಮಾತ್ರ ಅವರು ಬೆಳೆದಂತೆ ಅದರ ಶ್ರೇಷ್ಠತೆ ಅವರಿಗೆ ಅರಿವಾಗುತ್ತದೆ, ಮುಂದೆ ಅವರು ಸಹ ಈ ಸೇವಾ ಜೀವನವನ್ನು ಮುಂದುವರಿಸುತ್ತಾರೆ ಅಂತಹ ಪ್ರತಿಭೆಗಳು ಈ ಶಾಲೆಯಿಂದ ಹೊರಹೊಮ್ಮಲಿ ಈ ನಿಟ್ಟಿನಲ್ಲಿ ಇಲ್ಲಿನ ಶಿಕ್ಷಕಿಯರ ಸೇವಾ ಕಾರ್ಯವು ಪ್ರಮುಖವಾಗಿದೆ ಎಂದು ಹೇಳಿದ ಅವರು ಪುಟಪರ್ತಿಯ ಸತ್ಯಸಾಯಿ ಭಗವಾನ್ ಬಾಬಾ ಅವರ ನಂತರ ಸದ್ಗುರು ಡಾ. ಮಧುಸೂದನ್ ಸಾಯಿ ಅವರು ನೇತೃತ್ವದಲ್ಲಿ ಮುದ್ದೇನಹಳ್ಳಿ, ಅಳಕೆ ಸೇರಿದಂತೆ ರಾಜ್ಯ, ರಾಷ್ಟ್ರ ಹಾಗೂ ವಿವಿದ ದೇಶಗಳಲ್ಲಿ ಕಳೆದ 12 ವರ್ಷಗಳಿಂದ "ಒಂದು ಜಗತ್ತು ಒಂದು ಕುಟುಂಬ" ಎಂಬ ಉದ್ದೇಶದೊಂದಿಗೆ ಜನರಿಗೆ ಉಚಿತ ಪೌಷ್ಠಿಕತೆ ವಿತರಣೆ, ಉಚಿತ ಶಿಕ್ಷಣ, ಉಚಿತ ಆರೋಗ್ಯ ಸೇವೆ ಸೇರಿದಂತೆ ಸಾಕಷ್ಟು ಜನಪಯೋಗಿ ಸೇವೆಗಳು ನಡೆಯುತ್ತಾ ಬಂದಿವೆ. ಪ್ರಸ್ತುತ ದಿನಗಳಲ್ಲಿ ರಾಜ್ಯದ ಸರಕಾರಿ ಶಾಲೆಯ ಒಂದು ಕೋಟಿ ಜನ ಮಕ್ಕಳಿಗೆ ನ್ಯೂಟ್ರಿಷಿಯನ್ ಪೌಡರದೊಂದಿಗೆ ಹಾಲನ್ನು ಬೆರೆಸಿ ಬೆಳಗಿನ ಉಪಹಾರ ನೀಡಲಾಗುತ್ತದೆ. ಲಕ್ಷಾಂತರ ರೋಗಿಗಳಿಗೆ ಉಚಿತ ವೈದ್ಯಕೀಯ ಚಿಕಿತ್ಸೆ ನೀಡಲಾ ಗುತ್ತದೆ. ಇಲ್ಲಿ ಎಲ್ಲೂ ಸಹ ಬಿಲ್ಲಿನ ಕೌಂಟರ್ ಇರುವುದಿಲ್ಲ, ಸಾವಿರಾರು ವಿದ್ಯಾರ್ಥಿಗಳಿಗೆ ರಾಜ್ಯದ 18 ಜಿಲ್ಲೆಗಳಲ್ಲಿ ಆರನೇ ತರಗತಿಯಿಂದ ಪದವಿ ಸೇರಿದಂತೆ ಮೆಡಿಕಲ್, ಪ್ಯಾರಾಮೆಡಿಕಲ್, ಕೃಷಿ, ಸಂಬಂಧಿಸಿದ ಪದವಿಗಳಿಗೆ ಉಚಿತ ವಸತಿಯೊಂದಿಗೆ ಶಿಕ್ಷಣ ನೀಡಲಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲೆಯ ಶಿರಹಟ್ಟಿ ತಾಲ್ಲೂಕ ಮಜ್ಜೂರಿನ ಶ್ರೀ ಸತ್ಯಸಾಯಿ ವಾಣಿ ನಿಕೇತನ ಗುರುಕುಲದ ಚೇರಮನ್ನರಾದ ಬಿ.ಎಸ್. ಗೋಣಿ, ಕಾರ್ಯಾಧ್ಯಕ್ಷರಾದ ಡಾ. ಸೀಮಾ ಮೇಡಂ, ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷರಾದ ರುದ್ರಣ್ಣ ಗುಳಗುಳಿ, ಪ್ರೋ. ರಾಮಚಂದ್ರ ಜೋಗಿನ, ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಯ ಅಧ್ಯಕ್ಷರಾದ ವೆಂಕಟೇಶ ಇಮರಾಪೂರ, ಉಪಾಧ್ಯಕ್ಷರಾದ ಶ್ರೀಮತಿ ಮಲ್ಲಮ್ಮ ಕೊಪ್ಪದ, ಕಾರ್ಯದರ್ಶಿಗಳಾದ ಕವಿತಾ ಇಮರಾಪೂರ, ನಿರ್ದೇಶಕರಾದ ಮೋಹನ ಇಮರಾಪೂರ, ಮುತ್ತು ಜಡಿ, ಮುಖ್ಯೋಪಾದ್ಯಾಯುನಿ ಎಚ್.ಎಂ. ನದಾಫ್, ಸಹ ಶಿಕ್ಷಕಿಯರಾದ ಮಂಜುಳಾ ಹಿಡ್ಕಿಮಠ, ರೇಖಾ ಅಂಗಡಿ, ಸುಧಾ ತಿರಕಣ್ಣವರ, ಶೋಭಾ ಸಂಬರಗಿಮಠ, ಮಂಜುಳಾ ದಾಸರ, ವಂದನಾ ಕಲ್ಮನಿ ಸಿಬ್ಬಂದಿಗಳಾದ ಲಕ್ಷ್ಮೀ ಕಮಡೊಳ್ಳಿ, ಸೈನಾಜಬಾನು ರೋಣ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಶ್ರೀ ಭಗೀರಥ ಜಯಂತಿ ನಿಮಿತ್ಯ ಪೂರ್ವಸಿದ್ಧತಾ ಸಭೆ



**ಬೆಳಗಾವಿ ವಾರ್ತೆ ಗದಗ:** ಶ್ರೀ ಭಗೀರಥ ಜಯಂತಿ ಕುರಿತು ಪೂರ್ವಸಿದ್ಧತಾ ಸಭೆಯು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ಅವರ ಅಧ್ಯಕ್ಷತೆಯಲ್ಲಿ ಜರುಗಿತು.

ಜಿಲ್ಲಾಡಳಿತದಿಂದ ಏಪ್ರಿಲ್ 23 ರಂದು ಶ್ರೀ ಭಗೀರಥ ಜಯಂತಿಯನ್ನು ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ದಲ್ಲಿ ಸಾಂಕೇತಿಕವಾಗಿ ಆಚರಿಸಲಾಗುವುದು. ಸಮಾಜದವರು ಜಯಂತಿ ಕಾರ್ಯಕ್ರಮದ ದಿನಾಂಕವನ್ನು ನಿಗದಿಪಡಿಸಿದ ನಂತರ ಸಮಾಜದ ವತಿಯಿಂದ ಜಯಂತಿ ಕಾರ್ಯಕ್ರಮವನ್ನು ಆಚರಿಸಲಾಗುವುದು ಎಂದು ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಎಂ.ಎಂ.ತುಂಬರಮಟ್ಟಿ, ಅನಿಲ ಗರಗ, ಭೀಮನಗೌಡ ಪಾಟೀಲ, ರಾಜಶೇಖರ, ಶಿವಪುತ್ರಪ್ಪ ಕುಂದ್ರಳ್ಳಿ, ರಾಮಣ್ಣ ಉಪ್ಪಾರ, ಭೀಮಪ್ಪ ಉಪ್ಪಾರ, ದೇವಪ್ಪ ಉಪ್ಪಾರ, ಚನ್ನಪ್ಪ ಹಸರಂಬಿ,ರಾಜು ಗಡ್ಡಿ ಸೇರಿದಂತೆ ಸಮಾಜದ ಮುಖಂಡರು, ಗಣ್ಯರು, ಹಿರಿಯರು ಹಾಜರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಸವರಾಜ ಬಳ್ಳಾರಿ ಸರ್ವರಿಗೂ ಸ್ವಾಗತಿಸಿ ವಂದಿಸಿದರು.

# ಸರ್ಕಾರಿ ಶಾಲಾ ಅಭಿವೃದ್ದಿಗೆ ಸಮುದಾಯದ ಸಹಭಾಗಿತ್ವ ಅಗತ್ಯ

**ಬೆಳಗಾವಿ ವಾರ್ತೆ ಗದಗ:** ನಮ್ಮ ಶಾಲೆಯು ಅಭಿವೃದ್ಧಿಗಾಗಿ ನಾವು ಒಂದಾದರೂ ಹೆಜ್ಜೆಗುರುತನ್ನು ಬಿಟ್ಟು ಹೋಗಬೇಕು ಎಂದು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಉಪ ನಿರ್ದೇಶಕ ಹಾಗೂ ಪ್ರಾಂಶುಪಾಲರಾದ ಜಿ.ಎಂ. ಮುಂದಿನಮನಿ ಹೇಳಿದರು.

ಕರ್ನಾಟಕ ಸರಕಾರ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಗದಗ ಉಪನಿರ್ದೇಶಕರು (ಅಭಿವೃದ್ಧಿ) ಮತ್ತು ಆಡಳಿತ ಇವರ ಸಂಯುಕ್ತ ಆಶ್ರಯದಲ್ಲಿ ಡಾ. ಬಿ.ಆರ್ ಅಂಬೇಡ್ಕರ ಸಭಾ ಭವನದಲ್ಲಿ ಏಪ್ರಿಲ್ 9 ಗುರುವಾರ ರಂದು "2026–27ನೇ ಸಾಲಿನ ಗದಗ ಜಿಲ್ಲೆ ಸರಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ದಾಖಲಾತಿ (ಮಕ್ಕಳ ಸಂಖ್ಯೆ) ಹೆಚ್ಚಿಸಲು ಖಆಒಅ ಅದ್ಯಕ್ಷರು, ಉಪಾದ್ಯಕ್ಷರು, ಕಾರ್ಯದರ್ಶಿ, ಸದಸ್ಯರುಗಳಿಗೆ ಜಾಗೃತಿ ಶಿಬಿರ" ಕಾರ್ಯಕ್ರಮ ಜರುಗಿತು.

ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಉಪ ನಿರ್ದೇಶಕ ಹಾಗೂ ಪ್ರಾಂಶುಪಾಲರಾದ ಜಿ.ಎಂ. ಮುಂದಿನಮನಿ ಅವರು ಕಾರ್ಯಕ್ರಮವನ್ನು. ಉದ್ಘಾಟಿಸಿ ಮಾತನಾಡಿ,ನಾವು ಯಾರು? ನಾವು ಇಲ್ಲಿಗೆ ಏಕೆ ಬಂದಿದ್ದೇವೆ? ಮತ್ತು ನಮ್ಮ ಕೆಲಸವೇನು?" ಎಂಬ ಮೂರು ಪ್ರಶ್ನೆಗಳನ್ನು ನಾವು ಆತ್ಮಾವಲೋಕನ ಮಾಡಿಕೊಳ್ಳಬೇಕಿದೆ ಎಂದು ಹೇಳಿದರು.

ದಕ್ಷಿಣ ಕರ್ನಾಟಕದ ಜಿಲ್ಲೆಗಳಲ್ಲಿ ಜನರು ಶಿಕ್ಷಣಕ್ಕೆ ನೀಡುವ ಆದ್ಯತೆಯಿಂದಾಗಿ ಅವರು ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಬಲಿಷ್ಠರಾಗಿದ್ದಾರೆ. ಉತ್ತರ ಕರ್ನಾಟಕದಲ್ಲೂ ಅಂತಹ ಬದಲಾವಣೆ ಬರಬೇಕು. ಊರಿನ ಹತ್ತಾರು ಜಾತ್ರೆಗಳಿಗಿಂತ ಮಕ್ಕಳ ಶಿಕ್ಷಣದ ಹಬ್ಬ ನಮಗೆ ಮುಖ್ಯವಾಗಬೇಕು. ನಮ್ಮ ಮಕ್ಕಳು ಶಿಕ್ಷಣವನ್ನು ಪಡೆದು ಐಎಎಸ್, ಐಪಿಎಸ್ , ಉನ್ನತ ಅಧಿಕಾರಿಗಳಾಗಿ ಬೆಳೆಯಬೇಕು, ಎಂದು ಆಶಿಸಿದರು.

2026–27ನೇ ಸಾಲಿನ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ದಾಖಲಾತಿಯನ್ನು ಹೆಚ್ಚಿಸುವುದು ನಮ್ಮ ಇಂದಿನ ಮುಖ್ಯ



ಗುರಿ. ಅಂಗನವಾಡಿಗಳಲ್ಲಿ ಸಾವಿರಾರು ಮಕ್ಕಳಿದ್ದರೂ, ಶಾಲೆಗೆ ಬರುವಾಗ ಆ ಸಂಖ್ಯೆ ಕುಸಿಯುತ್ತಿದೆ. ಪ್ರತಿಯೊಬ್ಬ ಎಸ್‌ಡಿಎಂಸಿ ಸದಸ್ಯರು ಕನಿಷ್ಠ ಒಬ್ಬರು ಅಥವಾ ಇಬ್ಬರು ಹೊಸ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸುವ ಸಂಕಲ್ಪ ಮಾಡಬೇಕು. ಸರ್ಕಾರಿ ಶಾಲೆಯಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣ, ಬಿಸಿಯೂಟ, ವಿದ್ಯಾರ್ಥಿವೇತನ ಮತ್ತು ಅನುಭವಿ ಶಿಕ್ಷಕರಿದ್ದಾರೆ. ಗದಗ ಜಿಲ್ಲೆ ಶಿಕ್ಷಣ ಕ್ಷೇತ್ರದಲ್ಲಿ ರಾಜ್ಯಕ್ಕೆ ಮಾದರಿಯಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಡಯಟ್ ಹಿರಿಯ ಉಪನ್ಯಾಸಕ ಬಿ.ಎಫ್.ಅರವಟಗಿ, ಡಯಟ್ ಅಧಿಕ್ಷಕರು ಶ್ರೀನಿವಾಸ ಕುಲಕರ್ಣಿ, ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ (ಖಆಒಅ),ಸಧ್ಯಸರು ಉಪಸ್ಥಿತರಿದ್ದರು.

## ಪ್ರತೀಕ್ಷಾ ಗುಲಪ್ಪನವರ, ಶ್ರೇಯಾಂಕಾ ಹಿರೇಮಠ; ದ್ವಿತೀಯ ಪಿಯುಸಿ ವಿಜ್ಞಾನ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ





**ಬೆಳಗಾವಿ ವಾರ್ತೆ ಧಾರವಾಡ:** ಪ್ರಸಕ್ತ ಸಾಲಿನ ಪಿಯುಸಿ ವಿಜ್ಞಾನ ವಿಭಾಗದ ದ್ವಿತೀಯ ವಾರ್ಷಿಕ ಪರೀಕ್ಷೆಯಲ್ಲಿ ಹುಬ್ಬಳ್ಳಿ ಬೈರಿದೇವರಕೊಪ್ಪದ ವಿದ್ಯಾನಿಕೇತನ ಪಿಯು ಸೈನ್ಸ್ ಕಾಲೇಜ್‌ನ ವಿದ್ಯಾರ್ಥಿ ಪ್ರತೀಕ್ಷಾ ಗುಲಪ್ಪನವರ ಹಾಗೂ ಧಾರವಾಡ ನಿವಾಸಿಯಾದ, ಮಂಗಳೂರ (ವಲಚಿಲ್) ಎಕ್ಸ್ಪರ್ಟ್ ಪಿಯು ಕಾಲೇಜಿನ ವಿದ್ಯಾರ್ಥಿ ಶ್ರೇಯಾಂಕಾ ಸುರೇಶ ಹಿರೇಮಠ ಅವರು ಅತ್ಯುತ್ತಮ ಸಾಧನೆ ಮಾಡಿ, ಡಿಸ್ಟಿಂಕ್ಷನ್ ಪಡೆದಿದ್ದಾರೆ. ಪ್ರತೀಕ್ಷಾ ಗುಲಪ್ಪನವರ ಒಟ್ಟು 600 ಅಂಕಗಳಿಗೆ 584 ಅಂಕಗಳೊಂದಿಗೆ ಶೇ.97.33 ಫಲಿತಾಂಶ ಪಡೆದಿದ್ದಾರೆ. ಶ್ರೇಯಾಂಕಾ ಸುರೇಶ ಹಿರೇಮಠ ಅವರು ಒಟ್ಟು 600 ಅಂಕಗಳಿಗೆ 567 ಅಂಕಗಳೊಂದಿಗೆ ಶೇ.94.50 ಫಲಿತಾಂಶ ಪಡೆದಿದ್ದಾರೆ. ಈ ಸಾಧನೆಗೆ ಕುಟುಂಬದವರು, ಶಿಕ್ಷಕರು ಹಾಗೂ ಸ್ನೇಹಿತರು ಅಭಿನಂದನೆ ಸಲ್ಲಿಸಿದ್ದಾರೆ.

# ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗಿದ ರಾಷ್ಟ್ರೀಯ ಕಾಲುಬಾಯಿ ರೋಗ ನಿಯಂತ್ರಣ ಕಾರ್ಯಕ್ರಮದ ಜಿಲ್ಲಾ ಮೇಲುಸ್ತುವಾರಿ ಸಮಿತಿ ಸಭೆ



**ಬೆಳಗಾವಿ ವಾರ್ತೆ ಧಾರವಾಡ:** ಜಿಲ್ಲೆಯಲ್ಲಿ ಏಪ್ರೀಲ್ 23 ರಿಂದ ಮೇ 22, 2026 ರವರೆಗೆ ಜಿಲ್ಲೆಯ ಎಲ್ಲ ದನ ಹಾಗೂ ಎಮ್ಮೆಗಳಿಗೆ ಕಾಲುಬಾಯಿ ಜ್ವರ ಲಸಿಕೆ ಹಾಕುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಅಧಿಕಾರಿಗಳು ಮನೆ ಬಾಗಲಿಗೆ ಬಂದು ರೈತರ ದನ ಹಾಗೂ ಎಮ್ಮೆಗಳಿಗೆ ಕಾಲುಬಾಯಿ ಜ್ವರ ಲಸಿಕೆ ಹಾಕಲಿದ್ದಾರೆ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಹೇಳಿದರು.

ಅವರು ಏಪ್ರೀಲ್ 8 ರಂದು ಸಂಜೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂ ಗಣದಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕಾಲುಬಾಯಿ ರೋಗ ನಿಯಂತ್ರಣ ಕಾರ್ಯಕ್ರಮದ ಒಂಬತ್ತನೇಯ ಜಿಲ್ಲಾ ಮೇಲುಸ್ತುವಾರಿ ಸಮಿತಿ ಸಭೆ ಜರುಗಿಸಿ, ಮಾತನಾಡಿದರು.

ರಾಜ್ಯ ಕಾಲುಬಾಯಿ ರೋಗ ನಿಯಂತ್ರಣ ಕಾರ್ಯಕ್ರಮದ ಮೇಲುಸ್ತುವಾರಿ ಸಮಿತಿಯ ಸೂಚನೆಯಂತೆ, ಏಪ್ರೀಲ್ 23 ರಿಂದ ಮೇ 22, 2026 ರವರೆಗೆ ಒಂಬತ್ತನೇ ಸುತ್ತಿನ ಕಾಲುಬಾಯಿ ಜ್ವರ ಲಸಿಕೆ ಕಾರ್ಯಕ್ರಮವನ್ನು ಜಿಲ್ಲೆಯ ಎಲ್ಲಾ ದನ ಹಾಗೂ ಎಮ್ಮೆಗಳಿಗೆ ಹಾಕುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದಡಿ ರೈತರ ಮನೆ ಬಾಗಿಲಲ್ಲಿ ದನ ಮತ್ತು ಎಮ್ಮೆಗಳಿಗೆ ಕಾಲುಬಾಯಿ ಬೇನೆ ಲಸಿಕೆ ಹಾಕಲಾಗುವುದು. ಈ ಕಾರ್ಯಕ್ಕಾಗಿ ಜಿಲ್ಲೆಯಲ್ಲಿ 116 ತಂಡಗಳನ್ನು ರಚಿಸಿದ್ದು, ಪ್ರತಿ ತಂಡದಲ್ಲಿ ಒಬ್ಬರು ಮೇಲ್ವಿಚಾರಕರು ಹಾಗೂ ಇಬ್ಬರು ಲಸಿಕದಾರರು ಇರುತ್ತಾರೆ.

ಜಿಲ್ಲೆಯಲ್ಲಿರುವ 1,36,865 ದನಗಳು ಹಾಗೂ 47,172 ಎಮ್ಮೆಗಳನ್ನು ಲಸಿಕಾಕರಣಕ್ಕೆ ಒಳಪಡಿಸಲಾಗುವುದು. ಜಿಲ್ಲೆಯಲ್ಲಿ ಪ್ರತಿ 100 ಜಾನುವಾರಗಳಿಗೆ ಒಂದು ಬ್ಲಾಕ್ ನಂತೆ, 1854 ಬ್ಲಾಕ್‌ಗಳನ್ನು ಮಾಡಲಾಗಿದೆ. ಈ ಬ್ಲಾಕ್‌ಗಳನ್ನು ಲಸಿಕೆ ಅವಧಿಯಲ್ಲಿ ಸಂಪೂರ್ಣವಾಗಿ ಲಸಿಕೆಗೆ ಒಳಪಡಿಸಲಾಗುವುದು. ಲಸಿಕಾ ಅಭಿಯಾನದ ನಂತರ, ಅಭಿಯಾನದಲ್ಲಿ ಬಿಟ್ಟು ಹೋಗಿರುವ ಜಾನುವಾರುಗಳಿಗೆ ಲಸಿಕೆ ಹಾಕಲಾಗುವುದು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ತಿಳಿಸಿದರು.

ಕೇಂದ್ರ ಪುರಸ್ಕೃತ ಜಾನುವಾರು ರೋಗಗಳ ನಿಯಂತ್ರಣ ಯೋಜನೆ ಅಡಿಯಲ್ಲಿ 2030 ರೊಳಗಾಗಿ ದೇಶವನ್ನು ಕಾಲುಬಾಯಿ ಬೇನೆ ಮುಕ್ತಗೊಳಿಸಲು ಸಂಕಲ್ಪ ಮಾಡಲಾಗಿದೆ. ದೇಶದ ದನ, ಎಮ್ಮೆಗಳು ಕಾಲುಬಾಯಿ ಬೇನೆ ಮುಕ್ತವಾದಲ್ಲಿ, ಜಾನುವಾರುಗಳ ಉತ್ಪನ್ನಗಳನ್ನು ಹೆಚ್ಚಿಸಿ, ರೈತರ ಆರ್ಥಿಕ ಪರಿಸ್ಥಿತಿ ಉತ್ತಮಗೊಳ್ಳಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ಅವರು ಹೇಳಿದರು.

ಲಸಿಕಾ ಅಭಿಯಾನ ಕಾರ್ಯಕ್ರಮದಲ್ಲಿ ರೈತರು ತಮ್ಮ ಜಾನುವಾರುಗಳಿಗೆ ಲಸಿಕೆ ಹಾಕಿಸಿ ಶೇ.100 ರಷ್ಟು ಗುರಿ ಸಾಧಿಸಲು ಸಹಕರಿಸಲು ಗ್ರಾಮೀಣ ಭಾಗದಲ್ಲಿ ಹೆಚ್ಚು ಜಾಗೃತಿ ಮೂಡಿಸುವಂತೆ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ತಿಳಿಸಿದರು.

ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ. ಎಸ್.ವಿ. ಸಂತಿ ಅವರು ಸ್ವಾಗತಿಸಿ, ಸಭೆ ನಿರ್ವಹಿಸಿದರು.

ಸಭೆಯಲ್ಲಿ ಜಿಲ್ಲೆಯ ಎಲ್ಲ ತಾಲೂಕುಗಳ ಮುಖ್ಯ ಪಶುವೈದ್ಯಾಧಿಕಾರಿಗಳು, ಜಿಲ್ಲಾ ನಗರಾಭಿವೃದ್ಧಿ ಕೋಶದ ಕಾರ್ಯಪಾಲಕ ಅಭಿಯಂತರರು, ಧಾರವಾಡ ಹಾಲು ಒಕ್ಕೂಟದ ಪ್ರತಿನಿಧಿಗಳು ಭಾಗವಹಿಸಿದ್ದರು.

# ಮುದ್ದೇಬಿಹಾಳ: ರಕ್ತದಾನವೇ ಮಹಾದಾನ – ಡಾ. ಸತೀಶ್ ತಿವಾರಿ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಅನ್ನದಾನಕ್ಕಿಂತಲೂ ಮಹತ್ವದ ದಾನ ಯಾವುದಾದರೂ ಇದ್ದರೆ ಅದು ರಕ್ತದಾನವಾಗಿದ್ದು, ರಕ್ತದಾನವೇ ನಿಜವಾದ ಮಹಾದಾನ ಎಂದು ತಾಲೂಕು ಆರೋಗ್ಯಾಧಿಕಾರಿ ಡಾ. ಸತೀಶ್ ತಿವಾರಿ ಅವರು ಅಭಿಪ್ರಾಯಪಟ್ಟರು.

ತಾಲ್ಲೂಕಿನ ಮುದ್ನಾಳ ಗ್ರಾಮದಲ್ಲಿ ಹಡಲಗೇರಿ ಮಾದರಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಸತಿಯುಕ್ತ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ (NSS) ವಿಶೇಷ ವಾರ್ಷಿಕ ಶಿಬಿರದ ಅಂಗವಾಗಿ ಆಯೋಜಿಸಲಾಗಿದ್ದ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮಾನವನ ಜೀವ ಉಳಿಸಲು ರಕ್ತಕ್ಕೆ ಪರ್ಯಾಯವಿಲ್ಲ, ಹೀಗಾಗಿ ಪ್ರತಿಯೊಬ್ಬರೂ ರಕ್ತದಾನದ ಮಹತ್ವವನ್ನು ಅರಿಯಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಡಾ. ಮಹೇಶ್ವರಿ ಹಿರೇಮಠ ಮಾತನಾಡಿ, ಇಂದಿನ ಯುವ ಸಮೂಹ ತಂತ್ರಜ್ಞಾನದಲ್ಲಿ ಸಾಕಷ್ಟು ಮುಂದಿದ್ದರೂ ರಕ್ತದಾನದ ಬಗ್ಗೆ ಇನ್ನೂ ಅನೇಕ ಮೂಢನಂಬಿಕೆಗಳನ್ನು ಹೊಂದಿರುವುದು ವಿಷಾದನೀಯ. ಈ ಕುರಿತು ಸಮಾಜದಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವ ಅನಿವಾರ್ಯತೆ ಇದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ತಾಲೂಕು ಆಸ್ಪತ್ರೆಯ ಸಿಬ್ಬಂದಿಗಳಾದ ಡಾ. ಸಂಗಮೇಶ್ ದಶವಂತ್, ಡಾ. ಭಾಗ್ಯಶ್ರೀ ಬಿರಾದರ್, ಶ್ರೀಮತಿ ಅನಸೂಯ ತೆರೆದಾಳ, ಶ್ರೀ ಎಲ್ಲಪ್ಪ ಚಲವಾದಿ, ಶ್ರೀಮತಿ ಆಯ್.ಸಿ. ಮಾನಕರ, ಶ್ರೀ ಚರಲಿಂಗೇಶ ಬಿದರಕುಂದಿ, ಶ್ರೀ ಮಂಜುನಾಥ ಹಡಪದ ಹಾಗೂ ಕಾಲೇಜಿನ ಪ್ರೊ. ವನಿತಾ ಗಡೆದ, ಪ್ರೊ. ಮಾಂತೇಶ ಹುನಶ್ಯಾಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ವಿದ್ಯಾರ್ಥಿ ಜೀವನದಲ್ಲಿ ಎನ್.ಎಸ್.ಎಸ್ ಶಿಬಿರ ಸಮಾಜ ಸೇವೆಗೆ ಇರುವ ಸುವರ್ಣ ಅವಕಾಶ: ಪಲ್ಲವಿ ನಾಡಗೌಡ

# ಸೇವೆಯೇ ಸಂಸ್ಕಾರ: ಮುದ್ನಾಳದಲ್ಲಿ ಎನ್.ಎಸ್.ಎಸ್ ವಿಶೇಷ ಶಿಬಿರಕ್ಕೆ ಚಾಲನೆ

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ವಿದ್ಯಾರ್ಥಿ ದೆಸೆಯಲ್ಲಿ ಎನ್.ಎಸ್.ಎಸ್ ಶಿಬಿರಗಳು ಕೇವಲ ಶೈಕ್ಷಣಿಕ ಚಟುವಟಿಕೆಗಳಲ್ಲ, ಅವು ಸಮಾಜದ ವಾಸ್ತವಿಕತೆಯನ್ನು ಅರಿಯಲು ಮತ್ತು ಸೇವಾ ಮನೋಭಾವನೆಯನ್ನು ಮೈಗೂಡಿಸಿಕೊಳ್ಳಲು ಇರುವ ಸುವರ್ಣ ಅವಕಾಶಗಳಾಗಿವೆ" ಎಂದು ದೇವಿಕಾ ಸುಬ್ಬರಾವ್ ಫೌಂಡೇಷನ್ ಅಧ್ಯಕ್ಷರಾದ ಶ್ರೀಮತಿ ಪಲ್ಲವಿ ನಾಡಗೌಡ ಕರೆ ನೀಡಿದರು. ಪಟ್ಟಣದ ಆಲಮಟ್ಟಿ ರಸ್ತೆಯ ಹಡಲಗೇರಿ ಬಳಿಯಿರುವ ಮಾದರಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಸತಿಯುಕ್ತ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ (ಎನ್.ಎಸ್.ಎಸ್) ಘಟಕದ ವತಿಯಿಂದ ದತ್ತು ಗ್ರಾಮ ಮುದ್ನಾಳದಲ್ಲಿ ಹಮ್ಮಿಕೊಳ್ಳಲಾಗಿದ್ದ ವಾರ್ಷಿಕ ವಿಶೇಷ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಕಾರ್ಯಕ್ರಮದಲ್ಲಿ ಮುದ್ದೇಬಿಹಾಳ ಸರಕಾರಿ ಪಿಯು ಕಾಲೇಜಿನ ಉಪನ್ಯಾ ಸಕರಾದ ಸಿ. ಎಸ್. ನಾಲತವಾಡ ಅವರು ಮಾತನಾಡಿ, ವ್ಯಕ್ತಿ ಮತ್ತು ಸಮಾಜದ ನಡುವೆ ಆರೋಗ್ಯಕರ ಬಾಂಧವ್ಯವನ್ನು ಬೆಸೆಯುವುದೇ ಎನ್.ಎಸ್.ಎಸ್‌ನ ಮೂಲ ಉದ್ದೇಶ. ಶಿಸ್ತು ಮತ್ತು ಶ್ರಮದಾನದ ಮೂಲಕ ವಿದ್ಯಾರ್ಥಿಗಳು ಗ್ರಾಮ ವಿಕಾಸಕ್ಕೆ ನಾಂದಿ ಹಾಡಬೇಕು ಎಂದು ನುಡಿದರು.

ಕಾಲೇಜಿನ ಪ್ರಾಚಾರ್ಯರಾದ ಎಸ್. ಎಲ್. ಪಾಟೀಲ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಶಿಬಿರಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು. ಈ ಸಂದರ್ಭದಲ್ಲಿ ಪ್ರಮುಖರಾದ ಎಸ್. ಎಸ್. ರಾಮಥಾಳ, ಶಂಕರಗೌಡ ಪಾಟೀಲ್, ಎಸ್. ಎ. ಮೇರೆಖೋರ, ಅಬ್ದುಲ್ ರಜಾಕ್ ನದಾಫ್, ಎಸ್. ವಿ. ಬಸರಕೋಡ್, ಶಿವಪ್ರಕಾಶ್ ಗೂಳಿ, ನಾಗರಾಜ ದೊಡ್ಡಮನಿ ಹಾಗೂ ಕೆ. ಜಿ. ಗೆದ್ದಪ್ಪನವರ ಉಪಸ್ಥಿತರಿದ್ದರು.



ಬೋಧಕ ವರ್ಗದವರಾದ ಪ್ರೊ. ರೇವಣಸಿದ್ದಪ್ಪ ಅಮ್ಮಣ್ಣಿ, ಪ್ರೊ. ವಿನಯ್ ಗಡೆದ, ಪ್ರೊ. ಚೆನ್ನಮ್ಮ ಚೆಲುಮೂರ ಅವರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು. ಎನ್.ಎಸ್.ಎಸ್ ಕಾರ್ಯಕ್ರಮಾಧಿಕಾರಿಗಳಾದ ಪ್ರೊ. ರವಿ ಕಟ್ಟಿಮನಿ ಅವರು ಶಿಬಿರದ ರೂಪುರೇಷೆಗಳನ್ನು ವಿವರಿಸಿ, ಎಲ್ಲರನ್ನೂ ಸ್ವಾಗತಿಸಿದರು. ಗ್ರಾಮದ ಪ್ರಮುಖರು ಹಾಗೂ ವಿದ್ಯಾರ್ಥಿ ವೃಂದದವರು ಕಾರ್ಯಕ್ರಮಕ್ಕೆ ಸಾಕ್ಷಿಯಾದರು.

# ಪಿಯು ಪರೀಕ್ಷೆಯಲ್ಲಿ ತಾಯಿ-ಮಗಳು ಪಾಸ್



**ಬೆಳಗಾವಿ ವಾರ್ತೆ ಬೆಳಗಾವಿ(ಮೂಡಲಗಿ):** ಬೆಳಗಾವಿ ಜಿಲ್ಲೆಯ ಮೂಡಲಗಿ ಸಮೀಪದ ಕಲ್ಲೋಳಿ ಪಟ್ಟಣದ ಅಂಗನವಾಡಿಯಲ್ಲಿ ಕಾರ್ಯಕರ್ತೆಯಾಗಿ ಕಳೆದ 16 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಶಿಲ್ಪಾ ಸೋಮನಟ್ಟಿ(ಗಿರೆಣ್ಣವರ) ಈ ಬಾರಿಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದಾರೆ. ವಡೆರಹಟ್ಟಿ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಎಕ್ಸಟ್ರನಲ್ (ಹೊರಗಿನ) ಪರೀಕ್ಷೆ ಬರೆದಿರುವ ಅವರು ಶೇ. 54 ಅಂಕವನ್ನು ಪಡೆದಿದ್ದಾರೆ. ಇನ್ನೂ ಅವರ ಪುತ್ರಿ ಪಲ್ಲವಿ ಕೂಡ ಈ ಬಾರಿಯ ಪಿಯು ಪರೀಕ್ಷೆಯಲ್ಲಿ ಪಾಸಾಗಿದ್ದು, ತಾಯಿ-ಮಗಳು ಒಟ್ಟಿಗೆ ಪಾಸಾಗಿದ್ದಾರೆ.

ಶಿಲ್ಪಾ ಅವರ ಮಗಳು ಪಲ್ಲವಿ ಗಿರೆನ್ನವರ ನಾಗನೂರಿನ ಅಥರ್ವ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿದ್ದು, ಶೇ. 78 ಅಂಕ ಪಡೆದು ಉತ್ತೀರ್ಣರಾಗಿದ್ದಾರೆ.

# ಜಿಲ್ಲೆಯಾದ್ಯಂತ ಕುಡಿಯುವ ನೀರಿನ ಸಮಸ್ಯೆ ಇಲ್ಲ

**ಬೆಳಗಾವಿ ವಾರ್ತೆ ವಿಜಯಪುರ:** ಜಿಲ್ಲೆಯಲ್ಲಿ ವಿಪತ್ತು ನಿರ್ವಹಣೆ ಹಾಗೂ ಕುಡಿಯುವ ನೀರಿಗೆ ಅನುದಾನದ ಕೊರತೆಯಿಲ್ಲ. ಅದರಂತೆ,ಜಿಲ್ಲೆಯ ಯಾವುದೇ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಇಲ್ಲ ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಹೇಳಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಂಬರುವ ಬೇಸಿಗೆಯಲ್ಲಿ ನೀರಿನ ಸಮಸ್ಯೆ ಉಲ್ಬಣಿಸಬಹುದಾದ 11 ತಾಲೂಕುಗಳ 38 ಗ್ರಾಮ ಪಂಚಾಯತಿ ವ್ಯಾಪ್ತಿಯ 65 ಗ್ರಾಮಗಳನ್ನು ಗುರುತಿಸಲಾಗಿದೆ. ಅವುಗಳಲ್ಲಿ ನೀರಿನ ಯಾವುದೇ ಸಮಸ್ಯೆ ಉಂಟಾಗದಂತೆ ಅವಶ್ಯಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು.

ಆಲಮಟ್ಟಿ ಜಲಾಶಯದಲ್ಲಿ ಕಳೆದ ವರ್ಷ ಇದೇ ದಿನಾಂಕದಂದು 29.712 ಟಿಎಂಸಿ ನೀರಿತ್ತು. ಪ್ರಸ್ತುತ 34.895 ಟಿಎಂಸಿ ಅಂದರೆ ಅಂದಾಜು 5.183 ಟಿಎಂಸಿ ನೀರು ಹೆಚ್ಚಿನ ಪ್ರಮಾಣದಲ್ಲಿ ಲಭ್ಯವಿದೆ ತಿಳಿಸಿದರು.

ನಾರಾಯಣಪುರ ಜಲಾಶಯದಲ್ಲಿ ಕಳೆದ ವರ್ಷ 19.595 ಟಿಎಂಸಿ, ಪ್ರಸ್ತುತ 21.269 ಟಿಎಂಸಿ ಅಂದರೆ ಅಂದಾಜು 1.674 ಟಿಎಂಸಿ ನೀರು ಹೆಚ್ಚಿನ ಪ್ರಮಾಣದಲ್ಲಿ ಲಭ್ಯವಿದೆ ಎಂದು ಹೇಳಿದರು.

ಜಿಲ್ಲೆಯ ಬೇಡಿಕೆಯಂತೆ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರು, ಇಂಡಿ ತಾಲೂಕಿನ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಲುವಾಗಿ ಇಂಡಿ ಶಾಖಾ ಕಾಲುವೆಯಿಂದ 1.00 ಟಿಎಂಸಿ ನೀರನ್ನು ಏ. 11 ರಿಂದ ಏ. 23 ರವರೆಗೆ (12 ದಿನಗಳು) ನಿತ್ಯ ಒಂದು ಸಾವಿರ ಕ್ಯೂಸೆಕ್ ನಂತೆ ಹರಿಸಲು ಆದೇಶಿಸಲಾಗಿದೆ ಎಂದರು.

ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ 160 ಕೆರೆಗಳಿದ್ದು, ಅವುಗಳಲ್ಲಿ 66 ಕೆರೆಗಳು ಶೇ. 30 ರಷ್ಟು , 43 ಕೆರೆಗಳು ಶೇ. 31 ರಿಂದ 50 ರವರೆಗೆ ಹಾಗೂ 51 ಕೆರೆಗಳು ಶೇ. 51 ರಿಂದ 99 ರವರೆಗೆ ಭರ್ತಿಯಾಗಿವೆ ಎಂದರು.

ಜಿಲ್ಲೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಡಿ 40 ಬಹುಹಳ್ಳಿ ಕುಡಿಯುವ ನೀರಿನ ಯೋಜನೆಗಳಿದ್ದು , ಆಲಮಟ್ಟಿ ಜಲಾಶಯದ ಮೇಲೆ 10, ನಾರಾಯಣಪುರ ಜಲಾಶಯದ ಮೇಲೆ 8, ಭೀಮಾ ನದಿ ಮೂಲಕ 5 ಹಾಗೂ ಕಾಲುವೆ ಮುಖಾಂ ತರ 17 ಬಹು ಹಳ್ಳಿ ಕುಡಿಯುವ ನೀರಿನ ಯೋಜನೆ (ಎಂವಿಎಸ್) ಗಳು ಅವಲಂಬಿತ



ವಾಗಿರುತ್ತವೆ. ಈ ಯೋಜನೆಗಳಡಿ ಗ್ರಾಮೀಣ ಪ್ರದೇಶದ ವ್ಯಾಪ್ತಿಯಲ್ಲಿ ಗ್ರಾಮಗಳಿಗೆ ಕುಡಿಯುವ ನೀರು ಪೂರೈಸಲಾಗುತ್ತದೆ ಎಂದರು.

ಜಿಲ್ಲೆಯ ನಗರ ಪ್ರದೇಶಗಳಿಗೆ ಸರಬರಾಜು ಮಾಡುತ್ತಿರುವ ನೀರಿನ ಮೂಲಗಳಲ್ಲಿ ಪ್ರಸ್ತುತ ಸಾಕಷ್ಟು ನೀರು ಲಭ್ಯವಿರುತ್ತದೆ. ಹಾಗಾಗಿ ಎಲ್ಲಿಯೂ ನೀರಿನ ಸಮಸ್ಯೆ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಗಳನ್ನು, ತಾಲ್ಲೂಕು ಮಟ್ಟದಲ್ಲಿ ಕಾರ್ಯ ಪಡೆ (ಟಾಸ್ಕ್ ಫೋರ್ಸ್) ಸಭೆಗಳನ್ನು ಹಾಗೂ ಗ್ರಾಮ ಪಂಚಾಯತಿ ಮಟ್ಟದಲ್ಲಿ ಗ್ರಾಮ ಪಂಚಾಯತಿ ವಿಪತ್ತು ನಿರ್ವಹಣಾ ಸಮಿತಿ ಸಭೆಗಳನ್ನು ಜರುಗಿಸಿ ಕುಡಿಯುವ ನೀರಿನ ಯಾವುದೇ ಸಮಸ್ಯೆಯಾಗದಂತೆ ಮೇಲ್ವಿಚಾರಣೆ ಮಾಡಲಾಗುತ್ತಿದೆ ಎಂದು ವಿವರಿಸಿದರು.

ಸಾರ್ವಜನಿಕರು ಕುಡಿಯುವ ನೀರಿನ ಯಾವುದೇ ಸಮಸ್ಯೆಗಳಿದ್ದಲ್ಲಿ ಜಿಲ್ಲಾ ಮಟ್ಟದಲ್ಲಿ ಸ್ಥಾಪಿತ ಉಚಿತ ಸಹಾಯವಾಣಿ ಸಂಖ್ಯೆ 1077 ಕ್ಕೆ ಮಾಹಿತಿ ನೀಡಬಹುದಾಗಿದೆ ಎಂದು ನುಡಿದರು.

ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಿಷಿ ಆನಂದ ಅವರು ಮಾತನಾಡಿ, ಗ್ರಾಮೀಣ ಭಾಗದಲ್ಲಿ ಟ್ಯಾಂಕರ್ ಮೂಲಕ ಕುಡಿಯುವ ನೀರು ಪೂರೈಸಲಾಗುತ್ತಿಲ್ಲ. ಗ್ರಾಮೀಣ ಭಾಗದಲ್ಲಿ ಯಾವುದೇ ನೀರಿನ ಸಮಸ್ಯೆ ಇಲ್ಲ ಎಂದರು.

**ಜನಗಣತಿ:** ಗಣತಿದಾರರು ಮತ್ತು ಮೇಲ್ವಿಚಾರಕರು ಸರಿಯಾದ ರೀತಿಯಲ್ಲಿ ತರಬೇತಿ ಪಡೆದು ಕೊಂಡು ಗಣತಿ ಕಾರ್ಯವನ್ನು ಯಶಸ್ವಿ ಗೊಳಿಸಬೇಕು. ಜೊತೆಗೆ ಸಾರ್ವಜನಿಕರೂ ಜನ ಗಣತಿ ಕಾರ್ಯದ ಯಶಸ್ಸಿಗೆ ಕೈ ಜೋಡಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ.ಅವರು ಹೇಳಿದರು.

ಜನಗಣತಿಯು ದೇಶದ ಜನಸಂಖ್ಯೆಯ ಗಣತಿಯ ಜೊತೆಗೆ, ದೇಶದ ಸಾಮಾಜಿಕ, ಆರ್ಥಿಕ ಸ್ಥಿತಿಗಳು ಮತ್ತು ಸಾಂಸ್ಕೃತಿಕ ವೈವಿಧ್ಯತೆಯನ್ನು ದಾಖಲಿಸುವ ವೈಜ್ಞಾನಿಕ ಪ್ರಕ್ರಿಯೆಯಾಗಿದ್ದು, ಹಾಗಾಗಿ ಜನಗಣತಿ-2027ರ ಮೇಲ್ವಿಚಾರಕರ ಮತ್ತು ಗಣತಿದಾರರಿಗೆ ಹಮ್ಮಿಕೊಳ್ಳಲಾದ ತರಬೇತಿಯನ್ನು ಸರಿಯಾಗಿ ಪಡೆದುಕೊಂಡು, ಗಣತಿ ಕಾರ್ಯಕ್ಕೆ ತೆರಳಿದಾಗ ಸಾರ್ವಜನಿಕರಿಗೆ ಸೂಕ್ತ ತಿಳಿವಳಿಕೆ ನೀಡಿ, ಗಣತಿ ಕಾರ್ಯಕ್ಕೆ ಒಳಪಡಿಸುವ ಮೂಲಕ ಜನಗಣತಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು. ಜಿಲ್ಲೆಯ ಜನತೆ ಜನಗಣತಿಯಿಂದ ಹೊರುಗುಳಿಯಬಾರದು ಎಂದರು.

**ಡಿಜಿಟಲ್‌ಗಣತಿ:**

ಇದೇ ಮೊದಲ ಬಾರಿಗೆ ಭಾರತದ ಮೊದಲ ಡಿಜಿಟಲ್ ಜನಗಣತಿ ಕಾರ್ಯಕ್ಕೆ ಈಗಾಗಲೇ ಚಾಲನೆ ಸಿಕ್ಕಿದೆ ಎಂದು ತಿಳಿಸಿದರು. 2 ಹಂತಗಳಲ್ಲಿ ನಡೆಯಲಿರುವ ಗಣತಿ ಕಾರ್ಯವನ್ನು ಸ್ವತಃ ಗಣತಿದಾರರು ವಿಶೇಷ ಕಾಳಜಿ ವಹಿಸುವ ಮೂಲಕ ಯಶಸ್ವಿಗೊಳಿಸಬೇಕು ಎಂದರು.

ಈಗಾಗಲೇ ಸ್ವಯಂ ಗಣತಿ ಕಾರ್ಯ ಆರಂಭವಾಗಿದೆ. ಜನಗಣತಿಯ ಸುರಕ್ಷಿತ ವೆಬ್ ಪೋರ್ಟಲ್: https://se.census.gov.in ಗೆ ಮೊಬೈಲ್ ಸಂಖ್ಯೆ ಮತ್ತು ಒಟಿಪಿ ಬಳಸಿ ಲಾಗಿನ್ ಆಗಿ. ಬಳಿಕ ನಿಮ್ಮ ಸ್ಥಳ ಆಯ್ಕೆ ಮಾಡಿ. ನಕ್ಷೆಯಲ್ಲಿ ನಿಮ್ಮ ಮನೆ ಗುರುತಿಸಿ. ಬಳಿಕ ಮನೆಯ ಇಲ್ಲವೇ ಕುಟುಂಬದ ವಿವರ ಭರ್ತಿ ಮಾಡಿ, ನಿಮ್ಮ SE Reference ID ಪಡೆಯಬೇಕು ಎಂದು ಜಿಲ್ಲಾಧಿಕಾರಿಗಳು ಸಾರ್ವಜನಿಕರಿಗೆ ಮನವಿ ಮಾಡಿದರು.

ನಿಮ್ಮ SE ID ಅನ್ನು ಸುರಕ್ಷಿತವಾಗಿ ಇಟ್ಟು, Enumerator ಮನೆಗೆ ಬಂದಾಗ ಅದನ್ನು ಅವರೊಂದಿಗೆ ಹಂಚಿಕೊಳ್ಳಬೇಕು ಎಂದರು. ಏ. 16 ರಿಂದ ಮೇ 15 ರವರೆಗಿನ ಅವಧಿಯಲ್ಲಿ ಗಣತಿದಾರರು ಮನೆ-ಮನೆಗೆ ಭೇಟಿ ನೀಡಿ ವಿವರಗಳನ್ನು ಪರಿಶೀಲಿಸಬೇಕು ಎಂದರು.

ಒಂದು ವೇಳೆ ಸಾರ್ವಜನಿಕರು ಸ್ವಯಂ ಗಣತಿ ಪೂರ್ಣಗೊಳಿಸದಿದ್ದರೆ, ಅಂತವರ ಸ್ವಯಂ ಗಣತಿಯನ್ನು ಗಣತಿದಾರರೇ ಮಾಹಿತಿ ಸಂಗ್ರಹಿಸಿ ಗಣತಿ ಕಾರ್ಯ ಯಶಸ್ವಿಗೊಳಿಸಲಿದ್ದಾರೆ ಎಂದರು.

ಈ ಹಂತದಲ್ಲಿ ಸಾರ್ವಜನಿಕರ ಮಾಹಿತಿಯನ್ನು ಶೇ.100ರಷ್ಟು ಗೌಪ್ಯತೆ ಇದ್ದು, ಸ್ವಯಂ ಗಣತಿಯನ್ನು ಪೂರ್ಣಗೊಳಿಸುವಂತೆ ಗಣತಿದಾರರಿಗೆ ಸೂಚನೆ ನೀಡಲಾಗಿದೆ.

ಆಯಾ ಕುಟುಂಬದ ಮುಖ್ಯಸ್ಥರು ತಮ್ಮ ಕುಟುಂಬದ ಮಾಹಿತಿಯನ್ನು ಯಶಸ್ವಿಯಾಗಿ ಸಲ್ಲಿಸಿದ ನಂತರ, ಅವರಿಗೆ ಒಂದು ವಿಶಿಷ್ಟ ಸ್ವಯಂ-ಗಣತಿ ಐಡಿ (ಖಜಟಜಿ-ಇಟಿಣಟಜಡಿಚಿಣಜ ಏಆ) ನೀಡಲಾಗುತ್ತದೆ. ಈ ಐಡಿಯನ್ನು ಎಸ್ಎಂಎಸ್ ಮತ್ತು ಇಮೇಲ್ ಮೂಲಕ ಕಳುಹಿಸಲಾಗುತ್ತದೆ. ಅದನ್ನು ಮನೆಗೆ ಭೇಟಿ ನೀಡುವ ಗಣತಿದಾರರಿಗೆ (ಇಟಿಣಟಜಡಿಚಿಣಠಡಿ) ಆ ಐಡಿಯನ್ನು ಹಂಚಿಕೊಂಡು ಜನಗಣತಿ ಯಶಸ್ವಿಗೊಳಿಸಬೇಕು ಎಂದರು.

ಒಂದು ವೇಳೆ ಸಾರ್ವಜನಿಕರು ತಮ್ಮ ಸ್ವಯಂ ಗಣತಿ ಪೂರ್ಣಗೊಳಿಸದಿದ್ದರೆ, ಗಣತಿದಾರರೇ ಮಾಹಿತಿ ಸಂಗ್ರಹಿಸಬೇಕು ಎಂದರು.

ಜನಗಣತಿಯನ್ನು ಎರಡು ಹಂತಗಳಲ್ಲಿ ನಡೆಯುತ್ತಿದ್ದು,ಇದು ಸಂಪೂರ್ಣ ಡಿಜಿಟಲ್ ಪ್ರಥಮ ಜನಗಣತಿಯಾಗಿದೆ. ದಿನಾಂಕ: 01-04-2026 ರಿಂದ 15-4-2026ರವರೆಗೆ ಸ್ವಯಂ ಗಣತಿ ಕಾರ್ಯ ಪ್ರಗತಿಯಲ್ಲಿದೆ. ದಿನಾಂಕ:16-04-2026 ರಿಂದ 16-05-2026 ರವರೆಗೆ ಮನೆ ಪಟ್ಟಿ ಕ್ಷೇತ್ರ ಕಾರ್ಯ ನಡೆಇದೆ. ಎರಡನೇ ಹಂತದಲ್ಲಿ ಫೆಬ್ರವರಿ 2027 ರಿಂದ ಜನಸಂಖ್ಯಾ ಗಣತಿ ಕಾರ್ಯ ನಡೆಯಲಿದೆ ಎಂದು ಹೇಳಿದರು .

ಜನಗಣತಿ ಅಧಿಕಾರಿಯು ಮನೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಗಣತಿದಾರರು ಕೇಳುವ ಪ್ರಶ್ನೆಗಳಿಗೆ ಸರಿಯಾದ ಮಾಹಿತಿ ನೀಡುವ ಮೂಲಕ ಸಹಕರಿಸುವಂತೆಯೂ ಹಾಗೂ ಜಿಲ್ಲೆಯಲ್ಲಿ ಭಾರತ ಜನಗಣತಿ 2027 ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

# ಬೇಸಿಗೆಯಲ್ಲಿ ನೀರಿನ ಸಮಸ್ಯೆ ಆಗದಂತೆ ಕ್ರಮ ಕೈಗೊಳ್ಳಿ



**ಬೆಳಗಾವಿ ವಾರ್ತೆ ಚಡಚಣ:** ಚಡಚಣ ತಾಲೂಕಿನಲ್ಲಿ ಬೇಸಿಗೆ ವೇಳೆ ರೈತರು,ಜನಸಾಮಾನ್ಯರು ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಅಧಿಕಾರಿಗಳು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಶಾಸಕ ವಿಠ್ಠಲ ಕಟಕಧೋಂಡ ಸೂಚಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮಂಗಳವಾರ ನಡೆದ ತಾಲೂಕು ಮಟ್ಟದ ಟಾಸ್ಕಫೋರ್ಸ್ ಸಮಿತಿ ಸಭೆಯಲ್ಲಿ ಅವರು ಮಾತನಾಡಿದರು.

ಸಭೆಯಲ್ಲಿ ಮಾತನಾಡಿದ ಶಾಸಕ ಕಟಕಧೋಂಡ ಅವರು ಮುಂದಿನ ಎರಡು ತಿಂಗಳು ಕಡು ಬೇಸಿಗೆ ಸಮಯವಾದ್ದರಿಂದ ಕಾಲುವೆಗಳಿಗೆ ಬಿಟ್ಟ ನೀರನ್ನು ಕುಡಿಯುವ ಉದ್ದೇಶಕ್ಕಾಗಿ ಮಾತ್ರ ಬಳಸಬೇಕು ಎಂದು ರೈತರಿಗೆ ಮನವಿ ಮಾಡಿಕೊಂಡರು.

ಕೆಬಿಜೆಎಸ್‌ಎಲ್ ಅಧೀಕ್ಷಕ ಅಭಿಯಂತರ ಮನೋಜ ಕಡಬಳ್ಳಿ ಮಾತನಾಡಿ, ತಾಲೂಕಿನ ಎಲ್ಲ ಅಧಿಕಾರಿಗಳು ನಮ್ಮ ಕೆಬಿಜೆಎಸ್‌ಎಲ್‌ಗೆ ಸಹಕಾರಕೊಟ್ಟು ಎಲ್ಲರು ಕೂಡಿ ಕೆಲಸ ಮಾಡಿದರೆ ಮಾತ್ರ ಸಮಸ್ಯೆ ಬಗೆಹರಿಯಲಿದೆ, ಚಡಚಣ ಭಾಗದ ಹಾವಿನಾಳ ಹಾಗೂ ಹತ್ತಳ್ಳಿ ಭಾಗದ ಕಾಲುವೆಗಳವರೆಗೆ ಮಾತ್ರ ನೀರು ಹರಿಸಲು ಸಾಧ್ಯವಾಗುತ್ತದೆ ಆದ್ದರಿಂದ ಸಹಕಾರ ನೀಡುವಂತೆ ಎಲ್ಲ ಅಧಿಕಾರಿಗಳಿಗೆ ಮನವಿ ಮಾಡಿಕೊಂಡರು. ಡಿಎಐಎಸ್‌ಪಿ ಸದಾಶಿವ ಕಟ್ಟಿಮನಿ ಮಾತನಾಡಿ ನಮ್ಮ ಪೊಲಿಸ್ ಇಲಾಖೆಯ ಸಹಕಾರ ತಮ್ಮೊಂದಿಗೆ ಇರಲಿದೆ ಎಂದು ಹೇಳಿದರು. ಚಡಚಣ ತಹಶೀಲ್ದಾರ್ ಸಂಜಯ ಇಂಗಳೆ ಮಾತನಾಡಿ ನಮ್ಮ ಸಹಕಾರ ಈ ಮೊದಲು ಕೊಟ್ಟಿದ್ದೆವೆ ಈಗಲು ಇದೆ ಎಂದು ಹೇಳಿದರು. **ಅಚ್ಚರಿ ಮೂಡಿಸಿದ ಟಾಸ್ಕಫೋರ್ಸ್ ಸಮಿತಿ ಸಭೆ :** ಹೌದು ಒಂದೆ ವಾರದಲ್ಲಿ ಎರಡನೆಯ ಟಾಸ್ಕಫೋರ್ಸ್ ಸಮಿತಿ ಸಭೆಇದಾಗಿದ್ದು ಎಲ್ಲರಲ್ಲಿ ಕೂತುಹಲ ಮೂಡಿಸುತ್ತಿದೆ ಕಾಲುವೆ ನೀರು ಕೊನೆಯ ಗ್ರಾಮವಾದ ದಸೂರ ಅವರೆಗೆ ಹೊಗದಿದ್ದರು ಸರಿ ಹತ್ತಳ್ಳಿ ಬ್ಯಾರೇಜವರೆಗಾದರು ಕಾಲುವೆ ನೀರು ಹರಿಸಲೇಬೆಕೆಂಬ ನಿರ್ಧಾರ ತೆಗೆದುಕೊಂಡ ಶಾಸಕರ ಈ ನಡೆ ತಾಲೂಕಿನಾದ್ಯಂತ ರೈತರು ಹಾಗೂ ಜನಸಾಮಾನ್ಯರಲ್ಲಿ ಕೂತುಹಲ ಮತ್ತು ಅಚ್ಚರಿ ಮೂಡಿಸಿದೆ ಹಾಗೂ ಚರ್ಚೆಗೆ ಗ್ರಾಸವಾಗಿದೆ. ಕಾಲುವೆಗೆ ನೀರು ಹರಿಸುವ ಜವಾಬ್ದಾರಿಯಾಗಿದ್ದು, ಕೆಬಿಜೆಎಸ್‌ಎಲ್ ಇಲಾಖೆಯ ಅಧಿಕಾರಿಗಳ ಬೇಜವಾಬ್ದಾರಿಯಿಂದ ಕಾಲುವೆಗೆ ನೀರು ಹರಿಯುತ್ತಿಲ್ಲ ಎಂಬುದು ಸ್ಪಷ್ಟವಾಗಿ ತೋರುತ್ತಿದೆ. ಕೆಬಿಜೆಎಸ್‌ಎಲ್ ಇಲಾಖೆಯ ಅಧಿಕಾರಿಗಳು ತಮ್ಮ ತಪ್ಪನ್ನು ತಾಲೂಕಿನ ಇನ್ನಿತರ ಇಲಾಖಾಧಿಕಾರಿಗಳ ಮೇಲೆ ಹಾಕಿ ಕೈ ಕಟ್ಟಿ ಕುಳಿತಿರುವದಂತು ಅವರ ಮಾತಿನಿಂದಲೆ ತಿಳಿಯುತ್ತಿದೆ.ನಮ್ಮ ಏಳುಜನ ಕೆಬಿಜೆಎಸ್‌ಎಲ್ ಅಧಿಕಾರಿಗಳು ನಿಮ್ಮೊಂದಿಗೆ ಬರುತ್ತಾರೆ, ಪೊಲಿಸ್ ಹಾಗೂ ಕಂದಾಯ ಇಲಾಖೆಯವರು ಮುಂದಾಳತ್ವ ವಹಿಸಿಕೊಳ್ಳಬೇಕೆಂದು ಮನವಿ ಮಾಡಿಕೊಂಡಿದ್ದು ಅಚ್ಚರಿ ಮೂಡಿಸಿದೆ.

ಇನ್ನು ಕಾಲುವೆ ನೀರು ಹತ್ತಳ್ಳಿ ಬ್ಯಾರೇಜವರೆಗಾದರು ಬಂದು ತಲುಪುತ್ತವೆ ಎಂಬುದು ಕಾದು ನೋಡಬೇಕಾಗಿದೆ ಎಂದು ರೈತರು ಹಾದಿ ಕಾಯುತ್ತಿರುವದಂತು ಸತ್ಯ.

ಸಭೆಯಲ್ಲಿ ಇಂಡಿ ಉಪವಿಭಾಗಾಧಿಕಾರಿ ಚಿದಾನಂದ ಗುರುಸ್ವಾಮಿ, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಅಶೋಕಕುಮಾರ ರಾಠೋಡ, ಪ.ಪಂ.ಮುಖ್ಯಾಧಿಕಾರಿ ಬಿ.ಕೆ. ತಾವಸೆ, ಚಡಚಣ ಸಿಪಿಐ ಪರಶುರಾಮ ಮನಗೂಳಿ, ಪಿಎಸ್‌ಐ ಸೊಮೇಶ ಗೆಜ್ಜಿ, ಚಡಚಣ ಹೆಸ್ಕಾಂ ಎಇಇ ವಿಜಯಕುಮಾರ ಹವಾಲ್ದಾರ, ಶಿವದತ್ತ ಕೊಟ್ಟಲಗಿ, ಆಹಾರ ನಿರೀಕ್ಷಕ ಶಿವಾನಂದ ಕೋಳಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಗ್ರಾಮ ಲೆಕ್ಕಾಧಿಕಾರಿಗಳು ಹಾಗೂ ಆಡಳಿತಾಧಿಕಾರಿಗಳು ಉಪಸ್ಥಿತರಿದ್ದರು.

# ಬಸವೇಶ್ವರ ಪುತ್ಥಳಿ & ಅಂಬೇಡ್ಕರ್ ಪ್ರತಿಮೆಗೆ ಒಟ್ಟು 26 ಲಕ್ಷ ರೂಪಾಯಿಗಳನ್ನು ದೇಣಿಗೆಯನ್ನಾಗಿ ನೀಡುತ್ತಿರುವುದು ಸಂತಸವನ್ನುಂಟು ಮಾಡಿದೆ




ಮೂಡಲಗಿ: ಯಾದವಾಡ (ಕ್ರಾಸ್) ಸರ್ಕಲ್ ಹತ್ತಿರ ನಿರ್ಮಾಣವಾಗುತ್ತಿರುವ ಜಗಜ್ಯೋತಿ ಬಸವೇಶ್ವರ ಪುತ್ಥಳಿ ನಿರ್ಮಾಣಕ್ಕೆ ಡಾಲ್ಮಿಯಾ ಸಿಮೆಂಟ್ ಯಾದವಾಡ ಯೂನಿಟ್‌ದಿಂದ 16 ಲಕ್ಷ ರೂ ಚೆಕನ್ನು ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಮತ್ತು ಡಾಲ್ಮಿಯಾ ಸಿಮೆಂಟ್ ಯೂನಿಟ್ ಅಧಿಕಾರಗಳು ಯಾದವಾಡ ಮುಖಂಡರಿಗೆ ವಿತರಿಸಿದರು.

**ಬೆಳಗಾವಿ ವಾರ್ತೆ ಮೂಡಲಗಿ:** ಸಿಮೆಂಟ್ ವಲಯದಲ್ಲಿ ಹೆಸರುವಾಸಿಯಾಗಿರುವ ಡಾಲ್ಮಿಯಾ ಸಿಮೆಂಟ್ ಭಾರತ ಲಿ.., (ಡಿಸಿಬಿಎಲ್) ಯಾದವಾಡ ಯೂನಿಟ್ ಈ ಭಾಗದ ರೈತರು ಮತ್ತು ಸಾರ್ವಜನಿಕರ ಹಿತಕ್ಕೆ ಅನುಗುಣವಾಗಿ ಸಮಾಜಮುಖಿ ಕೆಲಸದಲ್ಲಿ ತೊಡಗಿಸಿ ಕೊಂಡಿರುವುದು ಶ್ಲಾಘನೀಯವಾಗಿದೆ. ಯಾದವಾಡ ಮತ್ತು ಕುಲಗೋಡದಲ್ಲಿ ನಿರ್ಮಾಣವಾಗುತ್ತಿರುವ ಬಸವೇಶ್ವರ ಪುತ್ಥಳಿ ಹಾಗೂ ಅಂಬೇಡ್ಕರ್ ಪ್ರತಿಮೆಗೆ ಒಟ್ಟು 26 ಲಕ್ಷ ರೂಪಾಯಿಗಳನ್ನು ದೇಣಿಗೆಯನ್ನಾಗಿ ನೀಡುತ್ತಿರುವುದು ಸಂತಸವನ್ನುಂಟು ಮಾಡಿದೆ ಎಂದು ಶಾಸಕ ಮತ್ತು ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರು ಹರ್ಷ ವ್ಯಕ್ತಪಡಿಸಿದರು.


ಮೂಡಲಗಿ- ಗುರ್ಲಾಪೂರ ಪ್ರವಾಸಿ ಮಂದಿರದಲ್ಲಿ ಯಾದವಾಡ ಮತ್ತು ಕುಲಗೋಡ ಪ್ರಮುಖರ ಸಭೆಯಲ್ಲಿ ಪಾಲ್ಗೊಂಡು ಡಾಲ್ಮಿಯಾ ಕಾರ್ಖಾನೆಯವರು ನೀಡಿರುವ ಒಟ್ಟು 26 ಲಕ್ಷ ರೂಪಾಯಿ ಚೆಕ್ ವಿತರಿಸಿ ಮಾತನಾಡಿದ ಅವರು, ಕಾರ್ಖಾನೆಯವರು ರೈತರ ಬೇಡಿಕೆಗಳಿಗೆ ಸಕಾರಾತ್ಮಕವಾಗಿ ಸ್ಪಂದನೆ ಮಾಡುತ್ತಿರುವುದು ಒಳ್ಳೆಯ ಬೆಳವಣಿಗೆ ಆಗಿದೆ ಎಂದು ಅವರು ಹೇಳಿದರು.

2006-07 ರಲ್ಲಿ ಆಗಿನ ಗೋಕಾಕ ಮತ್ತು ಈಗಿನ ಮೂಡಲಗಿ ತಾಲ್ಲೂಕಿನ ಯಾದವಾಡ ಗ್ರಾಮದಲ್ಲಿ ಆರಂಭಗೊಂಡಿರುವ ಡಾಲ್ಮಿಯಾ ಸಿಮೆಂಟ್ ಕಾರ್ಖಾನೆಗೆ ಈ ಭಾಗದ ರೈತರು ತಮ್ಮ ಜಮೀನುಗಳನ್ನು ನೀಡಿ ಕಾರ್ಖಾನೆ ನಿರ್ಮಾಣಕ್ಕೆ ಕಾರಣರಾದರು. ಸಾರ್ವಜನಿಕರು ಸಹ ಇದಕ್ಕೆ ಸಹಕಾರವನ್ನು ನೀಡಿದರು. ಕಾರ್ಖಾನೆ ಅಭಿವೃದ್ಧಿ ಜತೆಗೆ ಈ ಭಾಗದಲ್ಲಿ ಹಲವು ಸಾಮಾಜಿಕ ಚಟುವಟಿಕೆಗಳಿಗೆ ಕಾರ್ಖಾನೆಯು ತಮ್ಮದೇ ರೀತಿಯಲ್ಲಿ ಆರ್ಥಿಕವಾಗಿ ನೆರವು ನೀಡುತ್ತ ಬರುತ್ತಿದೆ. ಈ ಹಿಂದೆ 1 ಕೋಟಿ ರೂಪಾಯಿ ಹಣವನ್ನು ಯಾದವಾಡ ರಸ್ತೆ ನಿರ್ಮಾಣಕ್ಕೆ ನೀಡಿದೆ. ಕುಡಿಯುವ ನೀರಿನ ವ್ಯವಸ್ಥೆಗಾಗಿ 25 ಲಕ್ಷ ರೂಪಾಯಿ ಧನ ಸಹಾಯ ಮಾಡಿದೆ. ಯಾದವಾಡ ಸರ್ಕಾರಿ ಆಸ್ಪತ್ರೆಯ ನವೀಕೃತ ಕಟ್ಟಡ ಕಾಮಗಾರಿಗೆ 30 ಲಕ್ಷ ರೂಪಾಯಿ ಆರ್ಥಿಕ ನೆರವು ನೀಡಿದೆ. ಈಗ ಯಾದವಾಡ (ಕ್ರಾಸ್) ಸರ್ಕಲ್ ಹತ್ತಿರ ನಿರ್ಮಾಣವಾಗುತ್ತಿರುವ ಜಗಜ್ಯೋತಿ ಬಸವೇಶ್ವರ ಪುತ್ಥಳಿ ನಿರ್ಮಾಣಕ್ಕೆ 16 ಲಕ್ಷ ರೂಪಾಯಿ ನೀಡುತ್ತಿದೆ.

ಇದರ ಜತೆಯಲ್ಲಿ ಕುಲಗೋಡ ಗ್ರಾಮದಲ್ಲಿ ಎಲ್ಲ ಹಿರಿಯರು ಒಂದಾಗಿ ಬಸ್ ನಿಲ್ದಾಣದ ಹತ್ತಿರ ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಮೂರ್ತಿಯನ್ನು ನಿರ್ಮಾಣ ಮಾಡುತ್ತಿದ್ದು, ಇದರ ಕಾಮಗಾರಿಗೆ ಕಾರ್ಖಾನೆಯವರು 10 ಲಕ್ಷ ರೂಪಾಯಿ ವೆಚ್ಚವನ್ನು ಭರಿಸುತ್ತಿದ್ದಾರೆ. ಇಂತಹ ಹಲವು ಸಮಾಜಮುಖಿ ಕೆಲಸಗಳಲ್ಲಿ ತೊಡಗಿಸಿಕೊಂಡು ರೈತರಿಗೆ ವರದಾನವಾಗಿ, ನಿರುದ್ಯೋಗಿಗಳಿಗೆ ಉದ್ಯೋಗ ನೀಡುತ್ತಿರುವ ಡಾಲ್ಮಿಯಾ ಕಾರ್ಖಾನೆಯ ಕಾರ್ಯವನ್ನು ಪ್ರತಿಯೊಬ್ಬರೂ ಮೆಚ್ಚಲೇಬೇಕು ಎಂದು ತಮ್ಮ ಸಂತಸವನ್ನು ಹಂಚಿಕೊಂಡರು.

ವೇದಿಕೆಯಲ್ಲಿ ಡಾಲ್ಮಿಯಾ ಸಿಮೆಂಟ್ ಕಾರ್ಖಾನೆಯ ಯಾದವಾಡದ ಯೂನಿಟ್ ಮುಖ್ಯಸ್ಥ ಪ್ರಭಾತ್ ಕುಮಾರ ಸಿಂಗ್, ಸಾಂಸ್ಥಿಕ ವಿಭಾಗ ಮುಖ್ಯಸ್ಥ ಉಮೇಶ ದೇಸಾಯಿ, ಹಣಕಾಸು ಮತ್ತು ಲೆಕ್ಕ ವಿಭಾಗದ ಮುಖ್ಯಸ್ಥ ಅರಬಿಂದಕುಮಾರ ಸಿಂಗ್, ಮುಖಂಡರಾದ ಪರ್ವತಗೌಡ ಪಾಟೀಲ, ಅಶೋಕ ನಾಯಿಕ, ಪುಟ್ಟಣ್ಣ ಪೂಜೇರಿ, ಗೋವಿಂದ ಕೊಪ್ಪದ, ಬಸನಗೌಡ ಪಾಟೀಲ, ಸುನೀಲ ನ್ಯಾಮಗೌಡ, ಸುಭಾಸ ಒಂಟಗೋಡಿ, ಬಸವರಾಜ ಹಿಡ್ಕಲ್, ಕಾನೂನು ಸಲಹೆಗಾರ ರಮೇಶ ಮಳಲಿ, ವಿವಿಧ ಸಮುದಾಯಗಳ ಪ್ರಮುಖರು ಉಪಸ್ಥಿತರಿದ್ದರು.

# ಸಿಎಸ್ ಅಂಗಡಿ ಪದವಿ ಪೂರ್ವ ಮಹಾವಿದ್ಯಾಲಯ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ100ರಷ್ಟು ಫಲಿತಾಂಶ



ಗೋಕಾಕ: ಕಲಾ ವಿಭಾಗದಲ್ಲಿ ಅಡಿವೆಪ್ಪ ಮುಶೆಪ್ಪಗೋಳ 97.83%,



ಗೋಕಾಕ: ವಿಜ್ಞಾನ ವಿಭಾಗದಲ್ಲಿ ಪ್ರಜಕ್ತಾ ಜಾಧವ 98.83%,



ಗೋಕಾಕ: ವಾಣಿಜ್ಯ ವಿಭಾಗದಲ್ಲಿ ದಿವ್ಯಪ್ರಭಾ ಮನಿವನ್ನನ್ 99.50%

**ಬೆಳಗಾವಿ ವಾರ್ತೆ ಗೋಕಾಕ:** ನಗರದ ಕೆಎಲ್‌ಇ ಸಂಸ್ಥೆಯ ಸಿಎಸ್ ಅಂಗಡಿ ಪದವಿ ಪೂರ್ವ ಮಹಾವಿದ್ಯಾಲಯ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ100ರಷ್ಟು ಫಲಿತಾಂಶ ದೊರೆತಿದೆ.

190ವಿದ್ಯಾರ್ಥಿಗಳು 90%ಕ್ಕೂ ಅಧಿಕ ಅಂಕ ಪಡೆದಿದ್ದಾರೆ. 320 ವಿದ್ಯಾರ್ಥಿಗಳು ಡಿಸ್ಟಿಂಕ್ಷನನಲ್ಲಿ, 290 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ಕಲಾ ವಿಭಾಗದಲ್ಲಿ ಅಡಿವೆಪ್ಪ ಮುಶೆಪ್ಪಗೋಳ 97.83%, ವಿಜ್ಞಾನ ವಿಭಾಗದಲ್ಲಿ ಪ್ರಜಕ್ತಾ ಜಾಧವ 98.83%, ವಾಣಿಜ್ಯ ವಿಭಾಗದಲ್ಲಿ ದಿವ್ಯಪ್ರಭಾ ಮನಿವನ್ನನ್ 99.50% ಅಂಕ ಪಡೆದಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಯನ್ನು ಕೆಎಲ್‌ಇ ನಿರ್ದೇಶಕ ಜಯಾನಂದ ಮುನವಳ್ಳಿ, ಆಡಳಿತ ಮಂಡಳಿ, ಪ್ರಾಚಾರ್ಯ ಮಲ್ಲಿಕಾರ್ಜುನ ಕೌಜಲಗಿ ಹಾಗೂ ಸಿಬ್ಬಂಧಿ ಅಭಿನಂಧಿಸಿದ್ದಾರೆ.

# ಜಾರಕಿಹೊಳಿ ಪದವಿ ಪೂರ್ವ ಮಹಾವಿದ್ಯಾಲಯದ ವಿದ್ಯಾರ್ಥಿಗಳ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ



ವಾಣಿಜ್ಯ ವಿಭಾಗದಲ್ಲಿ ವೈಶಾಲಿ ಘೋರ್ಪಡೆ 584(97.33) ಪ್ರಥಮ



ಕಲಾ ವಿಭಾಗದಲ್ಲಿ ಸಿದ್ದು ಇಂಗಳೆ 571(95.17) ಪ್ರಥಮ



ವಿಜ್ಞಾನ ವಿಭಾಗದಲ್ಲಿ ಸಿದ್ದಾರೂಢ ಬಡಿಗೇರ 575 (95.85) ಪ್ರಥಮ.

**ಬೆಳಗಾವಿ ವಾರ್ತೆ ಗೋಕಾಕ:** ನಗರದ ಲಕ್ಷ್ಮಣರಾವ ಜಾರಕಿಹೊಳಿ ಪದವಿ ಪೂರ್ವ ಮಹಾವಿದ್ಯಾಲಯದ ವಿದ್ಯಾರ್ಥಿಗಳು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ. 474 ವಿದ್ಯಾರ್ಥಿ ಪರೀಕ್ಷೆ ಬರೆದಿದ್ದು 329 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

ಕಲಾ ವಿಭಾಗದಲ್ಲಿ ಸಿದ್ದು ಇಂಗಳೆ 571(95.17) ಪ್ರಥಮ, ಮಲ್ಲಿಕಾರ್ಜುನ ಅಂದಾನಿ 563(93.85) ದ್ವಿತೀಯ, ರಕ್ಷೀತಾ ಬಾಗೆವಾಡಿ 558(93) ತೃತೀಯ ಸ್ಥಾನ ಪಡೆದಿದ್ದಾರೆ. 16 ವಿದ್ಯಾರ್ಥಿಗಳು ಡಿಸ್ಟಿಂಕ್ಷನನಲ್ಲಿ, 49 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ವಾಣಿಜ್ಯ ವಿಭಾಗದಲ್ಲಿ ವೈಶಾಲಿ ಘೋರ್ಪಡೆ 584(97.33) ಪ್ರಥಮ, ಪೂಜಾ ತಮ್ಮನ್ನಗೋಳ 574(95.66) ದ್ವಿತೀಯ, ಶಾರದಾ ಮುತ್ತೇನ್ನವರ 555(92.50) ತೃತೀಯ ಸ್ಥಾನ ಪಡೆದಿದ್ದಾರೆ. 11 ವಿದ್ಯಾರ್ಥಿಗಳು ಡಿಸ್ಟಿಂಕ್ಷನನಲ್ಲಿ, 35 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ವಿಜ್ಞಾನ ವಿಭಾಗದಲ್ಲಿ ಸಿದ್ದಾರೂಢ ಬಡಿಗೇರ 575 (95.85) ಪ್ರಥಮ, ಸೃಜನಾ ವಸ್ತ್ರದ 573(95.50) ದ್ವಿತೀಯ, ರಕ್ಷೀತಾ ಮಲ್ಲಾಪೂರ 570(95) ತೃತೀಯ ಸ್ಥಾನ ಪಡೆದಿದ್ದಾರೆ. 27 ವಿದ್ಯಾರ್ಥಿಗಳು ಡಿಸ್ಟಿಂಕ್ಷನನಲ್ಲಿ, 100 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಯನ್ನು ಸಂಸ್ಥೆಯ ಚೇರಮನ ಡಾ.ಭೀಮಶಿ ಜಾರಕಿಹೊಳಿ, ವ್ಯವಸ್ಥಾಪಕ ನಿರ್ದೇಶಕ ಸನತ ಜಾರಕಿಹೊಳಿ, ಪ್ರಾಚಾರ್ಯ ಅರುಣ ಪೂಜೇರ ಹಾಗೂ ಸಿಬ್ಬಂಧಿ ಅಭಿನಂಧಿಸಿದ್ದಾರೆ.

# 75 ಬಾಣಂತಿಯರಿಗೆ ಅಗತ್ಯ ವಸ್ತುಗಳನ್ನು ಒಳಗೊಂಡ ಆರೋಗ್ಯ ಕಿಟ್‌ಗಳ ವಿತರಣೆ



**ಬೆಳಗಾವಿ ವಾರ್ತೆ ಘಟಪ್ರಭಾ:** ಬಾಣಂತಿಯರ ಆರೋಗ್ಯ ಹಾಗೂ ನವಜಾತ ಶಿಶುಗಳ ಸುರಕ್ಷತೆ ನಮ್ಮ ಸಂಸ್ಥೆಯ ಪ್ರಮುಖ ಆದ್ಯತೆಯಾ ಗಿದ್ದು, ಈ ಕಿಟ್‌ಗಳು ತಾಯಂದಿರಲ್ಲಿ ಆರೋಗ್ಯ ಜಾಗೃತಿ ಮೂಡಿಸುವುದರ ಜೊತೆಗೆ ಶಿಶುಗಳ ಸಮರ್ಪಕ ಆರೈಕೆಗೆ ಸಹಕಾರಿಯಾಗಲಿದೆ ಎಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ॥ ಬಿ.ಕೆ.ಎಚ್. ಪಾಟೀಲ ಹೇಳಿದರು.

ಅವರು ಮಂಗಳವಾರ ರಂದು ಸ್ಥಳೀಯ ಶ್ರೀ ಜೆ. ಜಿ. ಸಹಕಾರಿ ಆಸ್ಪತ್ರೆ ಸೊಸಾಯಿಟಿ ನಿಯಮಿತ, ಘಟಪ್ರಭಾ ವತಿಯಿಂದ ಅಮೃತ ಮಹೋತ್ಸವ ಪರ್ವ 2026 ರ ಅಂಗವಾಗಿ ಸ್ತ್ರೀರೋಗ ಮತ್ತು ಪ್ರಸೂತಿ ತಂತ್ರ ವಿಭಾಗದ ಆಶ್ರಯದಲ್ಲಿ 75 ಬಾಣಂತಿಯರಿಗೆ ಅಗತ್ಯ ವಸ್ತುಗಳನ್ನು ಒಳಗೊಂಡ ಆರೋಗ್ಯ ಕಿಟ್‌ಗಳನ್ನು ವಿತರಿಸಿ ಮಾತನಾಡಿ ತಾಯಿ ಮತ್ತು ಶಿಶು ಆರೋಗ್ಯದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಿದರು. ಈ ಕಿಟ್‌ಗಳ ವಿತರಣೆಯಿಂದ ಬಾಣಂತಿಯರಲ್ಲಿ ಸ್ವಚ್ಛತೆ, ಪೋಷಣೆಯ ಅರಿವು ಹೆಚ್ಚುವ ಸಾಧ್ಯತೆ ಇದ್ದು, ವಿಶೇಷವಾಗಿ ಗ್ರಾಮೀಣ ಹಾಗೂ ಹಿಂದುಳಿದ ವರ್ಗದ ತಾಯಂದಿರಿಗೆ ಅಗತ್ಯ ನೆರವು ದೊರಕುವ ಮೂಲಕ ಅವರ ಆರೋಗ್ಯದಲ್ಲಿ ಉತ್ತಮ ಬದಲಾವಣೆ ನಿರೀಕ್ಷಿಸಲಾಗಿದೆ. ಇದರಿಂದ ನವಜಾತ ಶಿಶುಗಳ ಆರೈಕೆಯ ಮಟ್ಟ ಸುಧಾರಿಸದೇ ತಾಯಿ-ಮಗು ಮರಣ ಪ್ರಮಾಣ ಕಡಿಮೆ ಮಾಡುವ ದಿಶೆಯಲ್ಲಿ ಸಹಕಾರಿಯಾಗಲಿದೆ ಹಾಗೂ ಸಮುದಾಯದಲ್ಲಿ ಆರೋಗ್ಯ ಸೇವೆಗಳ ಮೇಲಿನ ವಿಶ್ವಾಸವನ್ನು ಹೆಚ್ಚಿಸುವಲ್ಲಿ ಈ ಕಾರ್ಯಕ್ರಮ ಮಹತ್ವದ ಪಾತ್ರ ವಹಿಸಿದೆ ಎಂದರು ಕಾರ್ಯಕ್ರಮದ ಅಂತ್ಯದಲ್ಲಿ ಫಲಾನುಭವಿಗಳು ಸಂಸ್ಥೆಯ ಸೇವೆಯನ್ನು ಮೆಚ್ಚಿ ಕೃತಜ್ಞತೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕಾರ್ಯಕ್ರಮದಲ್ಲಿ ವೈದ್ಯರು, ನರ್ಸಿಂಗ್ ಸಿಬ್ಬಂದಿ ಹಾಗೂ ಇತರೆ ಸಿಬ್ಬಂದಿ ವರ್ಗದವರು. ಇದ್ದರು

# ಕುಟುಂಬದಲ್ಲಿ ಮೊದಲು ಜಾಗೃತರಾಗುವವರೆ ಮಹಿಳೆಯರು ಹಾಗಾಗಿ ಮಹಿಳಾ ಶಕ್ತಿ ದೇಶದ ಶಕ್ತಿಯಾಗಿದೆ



**ಬೆಳಗಾವಿ ವಾರ್ತೆ ಗೋಕಾಕ:** ಭಾರತೀಯ ಸಂಸ್ಕೃತಿಯಲ್ಲಿ ಪ್ರತಿದಿನ ಮಹಿಳಾ ದಿನಾಚರಣೆಯಾಗಿದ್ದು, ಕುಟುಂಬದಲ್ಲಿ ಮೊದಲು ಜಾಗೃತರಾಗುವವರೆ ಮಹಿಳೆಯರು ಹಾಗಾಗಿ ಮಹಿಳಾ ಶಕ್ತಿ ದೇಶದ ಶಕ್ತಿಯಾಗಿದೆ ಎಂದು ತಹಶೀಲ್ದಾರ ಡಾ. ಮೋಹನ ಭಸ್ಮೆ ಹೇಳಿದರು. ಗುರುವಾರದಂದು ನಗರದ ಶ್ರೀ ಮಹಾಲಕ್ಷ್ಮೀ ಸಭಾಂಗಣದಲ್ಲಿ ತಾಲೂಕು ಆಡಳಿತ, ತಾಲೂಕು ಪಂಚಾಯತ್ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭಾರತೀಯ ಸಂಸ್ಕೃತಿಯಲ್ಲಿ ಮಹಿಳೆಯರಿಗೆ ದೊಡ್ಡಸ್ಥಾನವಿದೆ. ಹೆಣ್ಣು ಬರಿ ಜೀವವಲ್ಲ, ಜೀವ ತುಂಬುವವರು, ಬಾಳನ್ನು ಬೆಳೆಗುವವರಾಗಿದ್ದಾರೆ. ಮಹಿಳೆ ತ್ಯಾಗದ ಚೈತನ್ಯವಾಗಿದ್ದು, ಬೇರೆಯವರಿಗಾಗಿ ತಮ್ಮ ಜೀವನವನ್ನು ಮುಡಿಪಾಗಿಡುತ್ತಾರೆ. ಮಹಿಳೆಯರ ಸಾಧನೆಯನ್ನು ಸಮಾಜ ಗೌರವಯುತವಾಗಿ ನೋಡುತ್ತಿದ್ದು, ಇಡೀ ಸಮಾಜಕ್ಕೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಮಾತೃ ಇಲಾಖೆಯಾಗಿ ಕಾರ್ಯನಿರ್ವಹಿಸುತ್ತಿರುವುದು ಶ್ಲಾಘನೀಯ ಎಂದು ಹೇಳಿದರು. ಕಾರ್ಯಕ್ರಮವನ್ನು ಕಾರ್ಮಿಕ ಮುಖಂಡ ಅಂಬಿರಾವ ಪಾಟೀಲ್ ಉದ್ಘಾಟಿಸಿದರು. ಇದೇ ಸಂದರ್ಭದಲ್ಲಿ ನಿವೃತ್ತ ಅಂಚಿನಲ್ಲಿರುವ ಅಂಗನವಾಡಿ ಕಾರ್ಯಕರ್ತೆಯರಿಗೆ, ವಿವಿಧ ಸ್ವರ್ಧೆಗಳಲ್ಲಿ ವಿಜೇತರಾದ ಕಾರ್ಯಕರ್ತೆಯರಿಗೆ ಸತ್ಕರಿಸಿ, ಗೌರವಿಸಲಾಯಿತು. ಈ ಸಂದರ್ಭದಲ್ಲಿ ತಾಪಂ ಅಧಿಕಾರಿಗಳಾದ ಪರಶುರಾಮ ಗಸ್ತೆ, ನೆರಲೆಕರ, ಜಿಪಂ ಮಾಜಿ ಸದಸ್ಯರುಗಳಾದ ಟಿ.ಆರ್.ಕಾಗಲ್, ಮಡೆಪ್ಪ ತೋಳಿನವರ, ಸಿಡಿಪಿಓಗಳಾದ ಡಿ.ಎಸ್.ಕೂಡವಕ್ಕಲಿಗ, ಯಲಪ್ಪ ಗದಾಡಿ ಉಪಸ್ಥಿತರಿದ್ದರು.

# ಕಳೆದು ಹೋದ ಮೊಬೈಲಗಳನ್ನು ಪತ್ತೆ ಹಚ್ಚಿ ವಾರಸುದಾರರಿಗೆ ಮರಳಿ ಹಸ್ತಾಂತರಿಸುವ ಕಾರ್ಯಕ್ರಮ

**ಬೆಳಗಾವಿ ವಾರ್ತೆ ಗೋಕಾಕ:** ಬೆಳಗಾವಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಯಾಗಿ ಅಧಿಕಾರಿ ಸ್ವೀಕರಿಸಿದಾಗಿನಿಂದ ಜಿಲ್ಲೆಯ ಎಲ್ಲ ಪೋಲಿಸ್ ಅಧಿಕಾರಿಗಳು ಹಾಗೂ ಸಿಬ್ಬಂಧಿಯವರ ಸಹಕಾರದಿಂದ ಯಾವುದೇ ರಾಜಿ ಸಂಧಾನ ಇಲ್ಲದೇ ಪ್ರಕರಣಗಳು ದಾಖಲಿಸಿಕೊಳ್ಳುತ್ತಿದ್ದು ಹೀಗಾಗಿ ಪ್ರಕರಣಗಳ ಸಂಖ್ಯೆ ಹೆಚ್ಚುತ್ತಿದ್ದು ಅವುಗಳನ್ನು ತನಿಖೆ ನಡೆಸುತ್ತಿದ್ದೇವೆ. ಸಾರ್ವಜನಿಕರು ಮೀಟರ್ ಬಡ್ಡಿ ದಂಧೆಕೋರರಿಂದ ಕಷ್ಟ ಅನುಭವಿಸುತ್ತಿದ್ದರೆ ನೇರವಾಗಿ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಿಸುವಂತೆ ಬೆಳಗಾವಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ರಾಮರಾಜನ್ ಕೆ ಹೇಳಿದರು.

ಅವರು, ಗುರುವಾರದಂದು ನಗರದ ಡಿವೈಎಸ್‌ಪಿ ಕಚೇರಿ ಆವರಣದಲ್ಲಿ ಕಳೆದು ಹೋದ ಮೊಬೈಲಗಳನ್ನು ಪತ್ತೆ ಹಚ್ಚಿ ವಾರಸುದಾರರಿಗೆ ಮರಳಿ ಹಸ್ತಾಂತರಿಸುವ ಕಾರ್ಯಕ್ರಮದ ನಂತರ ಪತ್ರಕರ್ತರೊಂದಿಗೆ ಸುದ್ದಿಗೋಷ್ಠಿ ನಡೆಸಿ ಮಾತನಾಡಿ, ಗೋಕಾಕ ವಿಭಾಗ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಅಕ್ರಮ ಚಟುವಟಿಕೆಗಳ ಬಗ್ಗೆ ಪೋಲಿಸ್ ಸಿಬ್ಬಂಧಿಯೊಂದಿಗೆ ನಿಗಾ ವಹಿಸಲಾಗಿದ್ದು, ಮೀಟರ್ ಬಡ್ಡಿ, ಮನೆ ದರೊಡೆ, ಜೂಜಾಟ, ಅಕ್ರಮ ಸರಾಯಿ ಮಾರಾಟ ಸೇರಿ ಅಕ್ರಮ ಚಟುವಟಿಕೆಗಳಲ್ಲಿ ಭಾಗವಹಿಸುವವರ ವಿರುದ್ಧ ಕಠೀಣ ಕ್ರಮಕೈಗೊಳ್ಳಲಾಗುತ್ತಿದೆ ಎಂದರು.

ಘಟಪ್ರಭಾ ವ್ಯಾಪ್ತಿಯ 125ಗ್ರಾಂ, ಟ್ರಾಕ್ಟರ್ ಟ್ರಾಲಿ 2, ಪಂಪ್ ಸೇಟ್ ಮತ್ತು 13ಕೇಬಲ್ ಕಳ್ಳತನ ಪ್ರಕರಣ ಬೇಧಿಸಲಾಗಿದೆ. ಬಂಗಾರ ಆಭರಣ ಕಳ್ಳತನ ಪ್ರಕರಣದಲ್ಲಿ ನಲ್ಲಾನಟ್ಟಿ ಹನಮಂತ ಪೂಜಾರಿ 37ವರ್ಷ, ಬಳೋಬಾಳ ಲಕ್ಷ್ಮಣ ರಾಮಪ್ಪ ಹಂಚಿನಮನಿ 29 ಆರೋಪಿಗಳು ಕಳ್ಳತನ ಮಾಡಿದ ಆಭರಣ, ವಾಹನ ಸಮೇತ ವಶಕ್ಕೆ ಪಡೆಯಲಾಗಿದೆ. ಕುಲಗೋಡ ಪೋಲಿಸ್ ಠಾಣೆ ವ್ಯಾಪ್ತಿಯ ಮನೆ ಕಳ್ಳತನ ಪ್ರಕರಣದಲ್ಲಿ 15ಗ್ರಾಂ ಚಿನ್ನ ಸಮೇತ ಆರೋಪಿಗಳಾದ ಬಸವರಾಜ ಯಲ್ಲಶೆಟ್ಟಿ 24, ಶ್ರೀಶೈಲ ಮೇತ್ರಿ 22, ಹನಮಂತ ಭಜಂತ್ರಿ 22 ಇವರನ್ನು ಬಂಧಿಸಲಾಗಿದೆ. ಘಟಪ್ರಭಾ ನದಿಗೆ ಅಳವಡಿಸಿದ್ದ ರೈತರ ಪಂಪ್ ಸೇಟ್ ಮತ್ತು ಕೇಬಲ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

**ಜಯಂತಿ ಸಭೆ ಸಮಾರಂಭಗಳಲ್ಲಿ ಡಿಜೆ ಬ್ಯಾನ್:** ಮಹಾತ್ಮರ ಆದರ್ಶಗಳನ್ನು ಅಳವಡಿಸಿಕೊಳ್ಳಬೇಕಾದ ನಾವು ಅವರ ಜಯಂತಿಯಲ್ಲಿ ಡಿಜೆ ಹಾಕಿ ನೃತ್ಯ ಮಾಡುವದು ತಪ್ಪು. ಡಿಜೆಯಿಂದಾಗಿ ಹೃದಯ ಸಂಬಂಧಿ ಕಾಯಿಲೆಯಿಂದ ಬಳಲುತ್ತಿರುವವರಿಗೆ ಹೆಚ್ಚಿನ ಸಮಸ್ಸೆ ಉಂಟಾಗುತ್ತದೆ. ಸುಪ್ರೀಂ ಕೋರ್ಟ ಸಹ ಡಿಜೆ ನಿಷೇಧ ಮಾಡಿದ್ದು ಸಾರ್ವಜನಿಕರು ಡಿಜೆ ಮಾಲಿಕರಿಗೆ ಲಕ್ಷಾಂತರ ರೂಗಳನ್ನು ವೆಚ್ಚ ಮಾಡಿ ಸಂಭ್ರಮಿಸುವ ಬದಲು ವಾದ್ಯ ಮೇಳದವರನ್ನು ಕರೆ ಅವರ ಕುಟುಂಬ ನೆರವಾಗುವ ಮೂಲಕ ಉಳಿಸಿ ಬೆಳೆಸುವ ಕಾರ್ಯವಾಗಬೇಕು ಎಂದು ಎಸ್‌ಪಿ ರಾಮರಾಜನ್ ಕೆ ಮನವಿ ಮಾಡಿದರು. ಇದೇ ಸಂದರ್ಭದಲ್ಲಿ ಗೋಕಾಕ ಉಪ ವಿಭಾಗದ ಪೋಲಿಸ್ ಠಾಣೆಗಳ 100ಕ್ಕೂ ಹೆಚ್ಚು ಕಳುವಾದ ಮೊಬೈಲ್ ಗಳನ್ನು ವಾರುಸುದಾರರಿಗೆ ಮರಳಿಸಲಾಯಿತು. ಈ ಸಂದರ್ಭದಲ್ಲಿ ಡಿವೈಎಸ್‌ಪಿ ರವಿ ಡಿನಾಯಿಕ, ಸಿಪಿಐಗಳಾದ ಸುರೇಶ ಬಾಬು, ಶ್ರೀಶೈಲ ಬ್ಯಾಕೂಡ, ಎಚ್ ಡಿ ಮುಲ್ಲಾ, ಜಾವೇದ ಮುಶಾಪುರೆ, ಪಿಎಸ್‌ಐಗಳಾದ ಕಿರಣ ಮೊಹಿತೆ, ಕೆ ವಾಲಿಕಾರ, ವಾಯ್ ಮಾಂಗ ಸೇರಿದಂತೆ ಪೋಲಿಸ್ ಸಿಬ್ಬಂಧಿ ಇದ್ದರು.




ಗೋಕಾಕ: ಬೆಳಗಾವಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ರಾಮರಾಜನ್ ಕೆ ಮಾತನಾಡುತ್ತಿರುವದು.

# ಮಿಲಿಟರಿ ಬಾಲಕಿಯರ ವಸತಿ ನಿಲಯಕ್ಕಾಗಿ ಅರ್ಜಿ ಆಹ್ವಾನ

ಧಾರವಾಡ: ಧಾರವಾಡ ಶಹರದ ಸಪ್ತಾಪೂರ ರಸ್ತೆಯಲ್ಲಿರುವ ಮಿಲಿಟರಿ ಬಾಲಕಿಯರ ವಸತಿ ನಿಲಯಕ್ಕಾಗಿ 2026-27ನೇ ಶೈಕ್ಷಣಿಕ ವರ್ಷಕ್ಕೆ ಧಾರವಾಡ, ಗದಗ, ಹಾವೇರಿ, ಮತ್ತು ಬಳ್ಳಾರಿ ಜಿಲ್ಲೆಗಳ ಗ್ರಾಮಾಂತರ ಪ್ರದೇಶ, ಹಾಗೂ ರಾಜ್ಯದ ಇತರ ಜಿಲ್ಲೆಗಳಲ್ಲಿರುವ ಯುದ್ದದಲ್ಲಿ ಮಡಿದ ಯೋಧರ ಮತ್ತು ಮಾಜಿ ಸೈನಿಕರ ಹೆಣ್ಣು ಮಕ್ಕಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ವಿದ್ಯಾರ್ಥಿಗಳು ಅರ್ಜಿ ನಮೂನೆಗಳನ್ನು ಜಂಟಿ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಕಚೇರಿಯಿಂದ ಪಡೆದು, ಮೇ 5, 2026 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಬಾಲಕಿಯರ ವಿದ್ಯಾರ್ಥಿನಿಲಯದಲ್ಲಿ 5 ನೇ ತರಗತಿಯಿಂದ ಪಿಯುಸಿ-2 ರ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗುತ್ತದೆ. ವಸತಿ ನಿಲಯದಲ್ಲಿ ವಾಸ್ತವ್ಯ ಮತ್ತು ಊಟೋಪಚಾರಗಳು ಉಚಿತವಾಗಿದ್ದು, ಮಾಜಿ ಸೈನಿಕರ ಹೆಣ್ಣು ಮಕ್ಕಳು ಈ ಸೌಲಭ್ಯದ ಉಪಯೋಗ ಪಡೆಯಬಹುದಾಗಿರುತ್ತದೆ. ವಸತಿ ನಿಲಯದಲ್ಲಿ ಧಾರವಾಡ ನಗರದಲ್ಲಿರುವ ವಿದ್ಯಾ ಸಂಸ್ಥೆಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿನಿಯರಿಗೆ ಮಾತ್ರ ನಿಲಯದಲ್ಲಿ ಪ್ರವೇಶ ನೀಡಲಾಗುವದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0836-2440176 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001